ಸಂಪುಟ : 11 ಸಂಚಿಕೆ: 78 ಪುಟ : 4+2 ಬೆಲೆ: 3.00 ಶನಿವಾರ ಏಪ್ರಿಲ್ 25 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 78 Pages : 4+2 Price : 3.00 Saturday April 25 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No: GDG/72/2023-25

## ಉಲ್ಲಾಸ ಹೊನ್ನಾಳ ದಾಖಲೆ: ಕೇಬಲ್ ಆಪರೇಟರ್ ಪುತ್ರ ಶಾಲೆಗೆ ಫಸ್ಟ್!



**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಡಿಜಿಟಲ್ ಕೇಬಲ್ ನೆಟ್ವರ್ಕ್ ಆಪರೇಟರ್ ಗೋವಿಂದ ಹೊನ್ನಾಳ ಅವರ ಸುಪುತ್ರ ಉಲ್ಲಾಸ ಹೊನ್ನಾಳ ಅವರು ಎಸ್ಎಸ್ಎಲ್ಸಿ ಪರೀಕ್ಷೆಯಲ್ಲಿ 94.72% ಅಂಕಗಳನ್ನು ಪಡೆದು ನಗರದ ಬಾಸಿಲ್ ಮಿಷನ್ ಶಾಲೆಗೆ ಪ್ರಥಮ ಸ್ಥಾನ ಪಡೆದು ಕೀರ್ತಿ ತಂದಿದ್ದಾರೆ.

ಈ ಸಾಧನೆಗೆ ಗದಗ್ ಡಿಜಿಟಲ್ ಕೇಬಲ್ ವತಿಯಿಂದ ಉಲ್ಲಾಸ ಹೊನ್ನಾಳ ಅವರಿಗೆ ಹೃತ್ಪೂರ್ವಕ ಅಭಿನಂದನೆಗಳನ್ನು ಸಲ್ಲಿಸಲಾಗಿದೆ. ಅವರ ಭವಿಷ್ಯ ಇನ್ನಷ್ಟು ಯಶಸ್ಸಿನಿಂದ ಕಂಗೊಳಿಸಲಿ ಎಂದು ಶುಭಾಶಯಗಳನ್ನು ತಿಳಿಸಿದ್ದಾರೆ.

## ಕಸಾಪದಿಂದ ಶಾಂತರಸ ದತ್ತಿ ಉಪನ್ಯಾಸ ಇಂದು

**■ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ಎಪ್ರಿಲ್ 25, 2026 ರಂದು ಸಂಜೆ 6.30 ಗಂಟೆಗೆ ನಗರದ ತೋಂಟದ ಸಿದ್ಧಲಿಂಗಶ್ರೀಗಳ ಕನ್ನಡ ಭವನದಲ್ಲಿರುವ ಕ.ಸಾ.ಪ. ಕಾರ್ಯಾಲಯದಲ್ಲಿ ಖ್ಯಾತ ಗಜಲ್ ಕವಿ ಡಾ. ಶಾಂತರಸ ಅವರ ಸ್ಮರಣಾರ್ಥ ದತ್ತಿ ಉಪನ್ಯಾಸ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಗದಗದ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ವಹಿಸಲಿದ್ದಾರೆ. "ಶಾಂತರಸರು ಮತ್ತು ಗಜಲ್: ಒಂದು ಅವಲೋಕನ" ಎಂಬ ವಿಷಯದ ಕುರಿತು ಕೂಡ್ಲಿಗಿಯ ನಿವೃತ್ತ ಪ್ರಾಚಾರ್ಯರು ಹಾಗೂ ಸಾಹಿತಿ ಸಿದ್ಧರಾಮ ಹಿರೇಮಠ ಉಪನ್ಯಾಸ ನೀಡಲಿದ್ದಾರೆ.

ಸಾಹಿತಿಗಳು ಹಾಗೂ ದತ್ತಿದಾನಿಗಳಾದ ಭಾರತಿ ಮೋಹನ ಕೋಟಿ ಅವರು ಕಾರ್ಯಕ್ರಮದಲ್ಲಿ ಉಪಸ್ಥಿತರಿರಲಿದ್ದಾರೆ.

"ಸಾಹಿತ್ಯಾಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು" ಎಂದು ಆಯೋಜಕರು ಮನವಿ ಮಾಡಿದ್ದಾರೆ.

ಪರಿಷತ್ತಿನ ಸದಸ್ಯರು, ಸಾಹಿತ್ಯಾಭಿಮಾನಿಗಳು ಹಾಗೂ ಸಹೃದಯರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಲು ಕಿಶೋರಬಾಬು ನಾಗರಕಟ್ಟಿ, ದತ್ತಪ್ರಸನ್ನ ಪಾಟೀಲ ಹಾಗೂ ಡಿ.ಎಸ್. ಬಾಪುರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 360 ವಿದ್ಯಾರ್ಥಿಗಳ ಸಾಮರ್ಥ್ಯದ ಬಾಡಿಗೆ ಕಟ್ಟಡ ಬೇಕಾಗಿದೆ

**■ವಿಜಯಸಾಕ್ಷಿ ಸುದ್ದಿ, ಗದಗ**

2026–27ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವತಿಯಿಂದ ಗದಗ ಪಟ್ಟಣದಲ್ಲಿ ಹೊಸದಾಗಿ ಮಂಜೂರಾಗಿರುವ ಮಹಿಳಾ ಪದವಿ ಪೂರ್ವ ಕಾಲೇಜಿಗೆ 360 ವಿದ್ಯಾರ್ಥಿಗಳ ಸಾಮರ್ಥ್ಯ ಹೊಂದಿರುವ ಬಾಡಿಗೆ ಕಟ್ಟಡ ಅಗತ್ಯವಿದೆ.

ನಗರಸಭೆ ವ್ಯಾಪ್ತಿಯೊಳಗೆ ಇರುವ ಹಾಗೂ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಹೊಂದಿರುವ ಕಟ್ಟಡಗಳನ್ನು ಬಾಡಿಗೆಗೆ ನೀಡಲು ಇಚ್ಛಿಸುವ ಮಾಲೀಕರು ತುರ್ತಾಗಿ ತಾಲೂಕ ವಿಸ್ತರಣಾಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಗದಗ ಉಪವಿಭಾಗವನ್ನು ಸಂಪರ್ಕಿಸಬಹುದು.

ಕಟ್ಟಡ ಮಾಲೀಕರು ಮೇ 1, 2026ರೊಳಗಾಗಿ ಸಂಬಂಧಪಟ್ಟ ಅಧಿಕಾರಿಗಳನ್ನು ಸಂಪರ್ಕಿಸುವಂತೆ ಸೂಚಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ 9741921025 ಸಂಖ್ಯೆಗೆ ಸಂಪರ್ಕಿಸಬಹುದು ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಜಿಲ್ಲಾಡಳಿತ ಭವನದಲ್ಲಿ ಡಾ. ರಾಜಕುಮಾರ ಅವರ ಅದ್ದೂರಿ ಜನ್ಮ ದಿನಾಚರಣೆ

# 'ಅಣ್ಣಾವ್ರು' ಮೌಲ್ಯಗಳು ಯುವಜನತೆಗೆ ದಾರಿದೀಪ



"ಡಾ. ರಾಜಕುಮಾರ್ ಅವರ ಜೀವನ, ಮೌಲ್ಯಗಳು ಮತ್ತು ನಡವಳಿಕೆಗಳು ಇಂದಿನ ಯುವಜನತೆಗೆ ದಾರಿದೀಪವಾಗಿವೆ"
–ಸಿ.ಎನ್. ಶ್ರೀಧರ್, ಜಿಲ್ಲಾಧಿಕಾರಿ.

**ಜಿಲ್ಲಾಧಿಕಾರಿಯಿಂದ 'ರಾಜ್' ಗೀತೆಯ ಸ್ಪಂದನೆ**

"ಪ್ರೀತಿನೆ ಆ ದ್ಯಾವ್ರು ತಂದ ಆಸ್ತಿ ನಮ್ಮ ಬಾಳ್ವೆಗೆ... ಹಸಿವಿನಲ್ಲೂ ಹಬ್ಬಾನೇ ದಿನವು ನಿತ್ಯ ಉಗಾದಿನೇ..." ಎಂಬ ಡಾ. ರಾಜಕುಮಾರ್ ಅವರ ಗೀತೆಯನ್ನು ಹಾಡುವ ಮೂಲಕ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ತಾವು ಕೂಡಾ ಅಣ್ಣಾವ್ರ ಅಭಿಮಾನಿ ಎಂದು ಅಭಿವ್ಯಕ್ತಿಸಿದರು.

ಸುಮಾರು ಐದು ದಶಕಗಳ ಸುದೀರ್ಘ ಸಿನಿ ಜೀವನದಲ್ಲಿ 200ಕ್ಕೂ ಹೆಚ್ಚು ಚಿತ್ರಗಳಲ್ಲಿ ಅಭಿನಯಿಸಿ, ಮನರಂಜನೆ ನೀಡುವುದರ ಜೊತೆಗೆ ಸಾಮಾಜಿಕ ಮೌಲ್ಯಗಳನ್ನು ಜನರಿಗೆ ತಲುಪಿಸಿದವರು ಡಾ. ರಾಜಕುಮಾರ್. 'ಬಂಗಾರದ ಮನುಷ್ಯ' ಚಿತ್ರದ ಮೂಲಕ ಕೃಷಿಯತ್ತ ಯುವಕರನ್ನು ಪ್ರೇರೇಪಿಸಿದರೆ, 'ಮಯೂರ' ಚಿತ್ರದ ಮೂಲಕ ಇತಿಹಾಸದ ಅರಿವು ಮೂಡಿಸಿದರು. ಕೃಷ್ಣ ಗಾರುಡಿಗ, ಸತ್ಯ ಹರಿಶ್ಚಂದ್ರ, ಕಸ್ತೂರಿ ನಿವಾಸ, ರಣಧೀರ ಕಂಠೀರವ, ಭಕ್ತ ಕನಕದಾಸ ಸೇರಿದಂತೆ ಅನೇಕ ಚಿತ್ರಗಳು ಕನ್ನಡ ಸಿನಿರಂಗದಲ್ಲಿ ಅಮರವಾಗಿವೆ.

**■ವಿಜಯಸಾಕ್ಷಿ ಸುದ್ದಿ, ಗದಗ**

ಕನ್ನಡ ಚಲನಚಿತ್ರರಂಗದ ದಿಗ್ಗಜ ಡಾ. ರಾಜಕುಮಾರ ಅವರ ವ್ಯಕ್ತಿತ್ವ, ಮೌಲ್ಯಗಳು ಮತ್ತು ಸಮಾಜದ ಮೇಲಿನ ಬದ್ಧತೆ ಇಂದಿನ ಯುವಪೀಳಿಗೆಗೆ ದಿಕ್ಕು ತೋರಿಸುವ ದಾರಿದೀಪವಾಗಿವೆ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅಭಿಪ್ರಾಯಪಟ್ಟರು.

ನಗರದ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಅಖಿಲ ಕರ್ನಾಟಕ ಡಾ. ರಾಜಕುಮಾರ್ ಅಭಿಮಾನಿ ಸಂಘಗಳ ಒಕ್ಕೂಟದ ಸಂಯುಕ್ತ ಆಶ್ರಯದಲ್ಲಿ ಜಿಲ್ಲಾಡಳಿತ ಭವನದ ಆಡಿಟೋರಿಯಂನಲ್ಲಿ ಶುಕ್ರವಾರ ನಡೆದ ಡಾ. ರಾಜಕುಮಾರ್ ಜನ್ಮದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಡಾ. ರಾಜಕುಮಾರ್ ಅವರು ಕೇವಲ ನಟರಲ್ಲ, ಸರಳತೆ, ಶಿಸ್ತು ಮತ್ತು ಮಾನವೀಯತೆಯ ಪ್ರತೀಕವಾಗಿದ್ದ ಮಹಾನ್ ವ್ಯಕ್ತಿ. ಕನ್ನಡ ನಾಡು–ನುಡಿ, ಸಂಸ್ಕೃತಿಯ ಮೇಲಿನ ಅವರ ಅಪಾರ ಪ್ರೀತಿ ಮತ್ತು ನಿಷ್ಠೆ ಅವರನ್ನು ಜನಮನಗಳಲ್ಲಿ ಶಾಶ್ವತವಾಗಿ ಉಳಿಸಿವೆ. ಅವರ ನಡೆ–ನುಡಿಗಳು ಸಮಾಜಕ್ಕೆ ಮಾದರಿಯಾಗಿದ್ದು, ಯುವಕರು ಅವರ ಜೀವನದಿಂದ ಪಾಠಗಳನ್ನು ಕಲಿಯಬೇಕು ಎಂದು ಹೇಳಿದರು.


ಸಮಾಜದ ಮೇಲಿನ ತಮ್ಮ ಬದ್ಧತೆಯನ್ನು ಅವರು ತಮ್ಮ ಜೀವನದಲ್ಲೇ ಪ್ರತಿಪಾದಿಸಿದ್ದು, 205 ಚಿತ್ರಗಳಲ್ಲಿ ಒಂದರಲ್ಲೂ ಮದ್ಯಪಾನ ಅಥವಾ ಧೂಮಪಾನದ ದೃಶ್ಯಗಳಲ್ಲಿ ನಟಿಸದಿರುವುದು ಅವರ ನೈತಿಕತೆಗೆ ಸಾಕ್ಷಿ ಎಂದು ಅಭಿಮಾನಿಗಳು ಸ್ಮರಿಸಿದರು.

ಅಖಿಲ ಕರ್ನಾಟಕ ಡಾ. ರಾಜಕುಮಾರ್ ಅಭಿಮಾನಿಗಳ ಸಂಘಗಳ ಒಕ್ಕೂಟದ ಗೌರವಾಧ್ಯಕ್ಷ ಬಸವರಾಜ ಮನಗುಂಡಿ ಮಾತನಾಡಿ, 1929 ಎಪ್ರಿಲ್ 24ರಂದು ಗಾಜನೂರಿನಲ್ಲಿ ಜನಿಸಿದ ಮುತ್ತುರಾಜು ನಂತರ ಡಾ. ರಾಜಕುಮಾರ್ ಎಂಬ ಹೆಸರಿನಿಂದ ಕನ್ನಡ ಚಿತ್ರರಂಗದಲ್ಲಿ ಅಮರರಾದರು ಎಂದು ಹೇಳಿದರು. ಗುಬ್ಬಿ ವೀರಣ್ಣನವರ ನಾಟಕ ಕಂಪನಿಯಿಂದ ಆರಂಭವಾದ ಅವರ ಪಯಣ 'ಬೇಡರ ಕಣ್ಣಪ್ಪ' ಚಿತ್ರದ ಮೂಲಕ ಬೆಳ್ಳಿ ತೆರೆಗೆ ಬೆಳಗಿತು ಎಂದು ತಿಳಿಸಿದರು.

ಪದ್ಮಭೂಷಣ, ದಾದಾಸಾಹೇಬ್ ಫಾಲ್ಕೆ, ಕರ್ನಾಟಕ ರತ್ನ ಸೇರಿದಂತೆ ಅನೇಕ ಪ್ರಶಸ್ತಿಗಳನ್ನು ಪಡೆದ ಅವರು ಕನ್ನಡಿಗರ ▸▸ 4ನೇ ಪುಟಕ್ಕೆ

### ಸಂಜೆ 4ಕ್ಕೆ ಭೀಷ್ಮ ಕೆರೆಯಲ್ಲಿ ಸಾರ್ವಜನಿಕರಿಗೆ ಉಚಿತ ದರ್ಶನ; ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲು ಡಿ ಆರ್ ಪಾಟೀಲ ಕರೆ

# ನಾಳೆ ಸೋಮನಾಥ ಜ್ಯೋತಿರ್ಲಿಂಗ ದರ್ಶನಕ್ಕೆ ಅವಕಾಶ




"ಜ್ಯೋತಿರ್ಲಿಂಗ ದರ್ಶನದಿಂದ ಅಪಾರ ಆಧ್ಯಾತ್ಮಿಕ ಶಕ್ತಿ ದೊರೆಯುತ್ತದೆ; ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು."
– ಡಿ.ಆರ್. ಪಾಟೀಲ, ಮಾಜಿ ಶಾಸಕ.

**■ವಿಜಯಸಾಕ್ಷಿ ಸುದ್ದಿ, ಗದಗ**

ಏಕಾಗ್ರತೆಯಿಂದ ಮಾನವ ಜೀವನದಲ್ಲಿ ಅದ್ಭುತ ಸಾಧನೆ ಸಾಧ್ಯವಾಗುತ್ತಿದ್ದು, ಜ್ಯೋತಿರ್ಲಿಂಗ ದಿವ್ಯ ದರ್ಶನದಿಂದ ಆಧ್ಯಾತ್ಮಿಕ ಶಕ್ತಿ ಲಭಿಸುತ್ತದೆ ಎಂದು ಮಾಜಿ ಶಾಸಕ ಡಿ.ಆರ್. ಪಾಟೀಲ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಸಾವಿರ ವರ್ಷಗಳ ಪುರಾತನ ಮೂಲದ ಸೋಮನಾಥ ಜೋತಿರ್ಲಿಂಗ ದೇವಾಲಯವು ಇತಿಹಾಸದಲ್ಲಿ ಹಲವು ಆಕ್ರಮಣಗಳಿಗೆ ಒಳಗಾಗಿ ಹಾನಿಗೊಳಗಾದರೂ, ಈಗ ಅದನ್ನು ಪುನರ್‌ಸ್ಥಾಪಿಸಿ ಭಕ್ತರಿಗೆ ದರ್ಶನಕ್ಕೆ ಸಿದ್ಧಪಡಿಸಲಾಗಿದೆ ಎಂದರು.

ಆರ್ಟ್ ಆಫ್ ಲಿವಿಂಗ್ ಸಂಸ್ಥೆಯ ರವಿಶಂಕರ್ ಅವರ ಮಾರ್ಗದರ್ಶನದಲ್ಲಿ ಎಪ್ರಿಲ್ 26ರಂದು ರವಿವಾರ ಸಂಜೆ 4 ಗಂಟೆಗೆ ನಗರದ ವಿಶ್ವಗುರು ಶ್ರೀ ಬಸವೇಶ್ವರ ಮೂರ್ತಿ ಸಮೀಪದ ಭೀಷ್ಮ ಕೆರೆಯಲ್ಲಿ ರುದ್ರಪೂಜೆ ಹಾಗೂ ಸತ್ಸಂಗದೊಂದಿಗೆ ಮೊದಲ ಬಾರಿಗೆ ಸಾರ್ವಜನಿಕರಿಗೆ ಉಚಿತ ಜ್ಯೋತಿರ್ಲಿಂಗ ದರ್ಶನ ವ್ಯವಸ್ಥೆ ಮಾಡಲಾಗಿದೆ ಎಂದು ತಿಳಿಸಿದರು.

ಭಾರತದಲ್ಲಿ ಒಟ್ಟು 12 ಜ್ಯೋತಿರ್ಲಿಂಗಗಳಿದ್ದು, ಶಿವನು ಸ್ವತಃ ಈ ಸ್ಥಳಗಳಲ್ಲಿ ವಾಸಿಸಿದ್ದಾನೆಂಬ ನಂಬಿಕೆ ಇದೆ. ಇವು ಭಕ್ತರ ಹೃದಯದಲ್ಲಿ ವಿಶೇಷ ಸ್ಥಾನವನ್ನು ಹೊಂದಿವೆ ಎಂದು ಹೇಳಿದರು.

ಜ್ಯೋತಿರ್ಲಿಂಗದಲ್ಲಿ ಅತೀ ಸೂಕ್ಷ್ಮ ಮತ್ತು ಅಪಾರ ಶಕ್ತಿ ಅಡಗಿದ್ದು, ಅದನ್ನು ಅನುಭವಿಸುವ ಮೂಲಕ ಮನಸ್ಸಿನ ಏಕಾಗ್ರತೆ ಹಾಗೂ ಆಧ್ಯಾತ್ಮಿಕ ಬೆಳವಣಿಗೆ ಸಾಧ್ಯವಾಗುತ್ತದೆ. "ನಮ್ಮ ಮನಸ್ಸನ್ನು ಹೇಗೆ ರೂಪಿಸಿಕೊಳ್ಳುತ್ತೇವೆಯೋ ಅದರಂತೆ ಜೀವನ ರೂಪುಗೊಳ್ಳುತ್ತದೆ" ಎಂದು ಅವರು ಅಭಿಪ್ರಾಯಪಟ್ಟರು.

ಪತ್ರಿಕಾಗೋಷ್ಠಿಯಲ್ಲಿ ಆರ್ಟ್ ಆಫ್ ಲಿವಿಂಗ್‌ನ ಹಿರಿಯ ಶಿಕ್ಷಕಿ ಕೋಮಲಾ, ಹಿರಿಯ ಸಾಹಿತಿ ಜೆ.ಕೆ. ಜಮಾದಾರ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ತೋಂಟದಾರ್ಯ ಮಠ ಮುಂಭಾಗದ ರಸ್ತೆ ಮುಕ್ತಗೊಳಿಸಿ



**■ವಿಜಯಸಾಕ್ಷಿ ಸುದ್ದಿ, ಗದಗ**

ಹಿಂದೂ ವೀರಶೈವ ಲಿಂಗಾಯತ ಯುವ ವೇದಿಕೆಯ ನೇತೃತ್ವದಲ್ಲಿ ನಗರದ ಶ್ರೀ ಜಗದ್ಗುರು ತೋಂಟದಾರ್ಯ ಮಠದ ಮುಂಭಾಗದಲ್ಲಿರುವ ಸಾರ್ವಜನಿಕ ರಸ್ತೆಯಲ್ಲಿ ನಿರ್ಮಾಣಗೊಂಡಿರುವ ಅನಧಿಕೃತ ಅಂಗಡಿ ಮಳಿಗೆಗಳನ್ನು ತೆರವುಗೊಳಿಸುವಂತೆ ಆಗ್ರಹಿಸಿ ನಡೆಸುತ್ತಿರುವ ಅನಿರ್ದಿಷ್ಟಾವಧಿ ಹೋರಾಟ ಎರಡನೇ ದಿನಕ್ಕೆ ಕಾಲಿಟ್ಟಿದೆ. ನಗರದ ಹೃದಯ ಭಾಗದಲ್ಲಿರುವ ಈ ರಸ್ತೆಯಲ್ಲಿ ಅನಧಿಕೃತವಾಗಿ ಅಂಗಡಿ ಮುಂಗಟ್ಟುಗಳನ್ನು ನಿರ್ಮಿಸಿರುವುದರಿಂದ ದಿನನಿತ್ಯ ಸಾವಿರಾರು ಜನರ ಸಂಚಾರಕ್ಕೆ ಅಡಚಣೆ ಉಂಟಾಗುತ್ತಿದೆ ಎಂದು ಸಂಘಟನೆಯವರು ಆರೋಪಿಸಿದ್ದಾರೆ. ಈ ಪ್ರದೇಶದಲ್ಲಿ ಬ್ಯಾಂಕ್ ವ್ಯವಹಾರಗಳು ಸೇರಿದಂತೆ ಸಾರ್ವಜನಿಕರ ಪ್ರಮುಖ ಚಟುವಟಿಕೆಗಳು ನಡೆಯುತ್ತಿದ್ದು, ಸಂಚಾರಕ್ಕೆ ತೊಂದರೆ ಉಂಟಾಗುತ್ತಿರುವುದು ಜನರಿಗೆ ಕಿರಿಕಿರಿ ತಂದಿದೆ ಎಂದು ತಿಳಿಸಿದ್ದಾರೆ.

ಬಾಹ್ಯ ರಾಜ್ಯಗಳ ವ್ಯಾಪಾರಸ್ಥರು ಅನಧಿಕೃತವಾಗಿ ಮಳಿಗೆಗಳನ್ನು ಸ್ಥಾಪಿಸಿರುವುದರಿಂದ ಸಾರ್ವಜನಿಕರಿಗೆ ಓಡಾಡಲು ಅಸೌಕರ್ಯ ಉಂಟಾಗಿದೆ. ತಕ್ಷಣವೇ ಈ ಅಂಗಡಿಗಳನ್ನು ತೆರವುಗೊಳಿಸಿ ರಸ್ತೆವನ್ನು ಸಾರ್ವಜನಿಕ ಸಂಚಾರಕ್ಕೆ ಮುಕ್ತಗೊಳಿಸಬೇಕು ಎಂದು ಆಗ್ರಹಿಸಲಾಗಿದೆ.

ಈ ಬೇಡಿಕೆ ಈಡೇರಿಸುವಂತೆ ಒತ್ತಾಯಿಸಿ ಎಪ್ರಿಲ್ 23ರಿಂದ ಗದಗ ನಗರದ ಗಾಂಧಿ ವೃತ್ತದಲ್ಲಿ ವಿವಿಧ ಹಿಂದೂಪರ ಹಾಗೂ ದಲಿತ ಸಂಘಟನೆಗಳು, ಸ್ಥಳೀಯ ವ್ಯಾಪಾರಸ್ಥರೊಂದಿಗೆ ಅನಿರ್ದಿಷ್ಟಾವಧಿ ಪ್ರತಿಭಟನೆ ಮುಂದುವರಿಸುತ್ತಿದ್ದಾರೆ.

### ಹೇಮರೆಡ್ಡಿ ಮಲ್ಲಮ್ಮ ಜಯಂತಿಯ ಪೂರ್ವಸಿದ್ಧತಾ ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಸೂಚನೆ

# ಮೇ 10ರಂದು ಹೇಮರೆಡ್ಡಿ ಮಲ್ಲಮ್ಮ ಜಯಂತಿ ಅಚ್ಚುಕಟ್ಟಾಗಿ ಆಚರಿಸಿ

"ಜಯಂತಿಯನ್ನು ಅರ್ಥಪೂರ್ಣವಾಗಿ ಹಾಗೂ ಶಿಸ್ತಿನೊಂದಿಗೆ ಆಚರಿಸಲು ಎಲ್ಲಾ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು."
– ಡಾ. ದುರಗೇಶ್ ಕೆ.ಆರ್, ಅಪರ ಜಿಲ್ಲಾಧಿಕಾರಿ.



**■ವಿಜಯಸಾಕ್ಷಿ ಸುದ್ದಿ, ಗದಗ**

ಶಿವಶರಣೆ ಶ್ರೀ ಹೇಮರೆಡ್ಡಿ ಮಲ್ಲಮ್ಮ ಜಯಂತಿಯನ್ನು ಮೇ 10ರಂದು ನಗರದ ಕೆ.ಎಚ್. ಪಾಟೀಲ ಸಭಾಭವನದಲ್ಲಿ ವ್ಯವಸ್ಥಿತವಾಗಿ ಹಾಗೂ ಅಚ್ಚುಕಟ್ಟಾಗಿ ಆಚರಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್ ಸೂಚಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ತಾಲೂಕು ಮಟ್ಟದಲ್ಲಿ ತಹಸೀಲ್ದಾರರ ಅಧ್ಯಕ್ಷತೆಯಲ್ಲಿ ಜಯಂತಿ ಆಚರಣೆಗೆ ಕ್ರಮ ವಹಿಸಬೇಕು ಎಂದು ತಿಳಿಸಿದರು. ಜಿಲ್ಲಾ ಮಟ್ಟದ ಅಧಿಕಾರಿಗಳು ಗ್ರಾಮ ಪಂಚಾಯಿತಿ, ಶಾಲೆ ಹಾಗೂ ಕಾಲೇಜುಗಳಲ್ಲಿ ಶಿವಶರಣೆ ಶ್ರೀ ಹೇಮರೆಡ್ಡಿ ಮಲ್ಲಮ್ಮ ಜಯಂತಿ ಆಚರಿಸಲು ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು.

ಎಸ್ಎಸ್ಎಲ್ಸಿ ಹಾಗೂ ಪಿಯುಸಿ ಪರೀಕ್ಷೆಗಳಲ್ಲಿ ಹೆಚ್ಚು ಅಂಕ ಗಳಿಸಿದ ಸಮಾಜದ ವಿದ್ಯಾರ್ಥಿಗಳಿಗೆ, ಪದವಿಯಲ್ಲಿ ಚಿನ್ನದ ಪದಕ ಪಡೆದವರಿಗೆ ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದ ಸಮಾಜದ ಹಿರಿಯರಿಗೆ ಸನ್ಮಾನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುತ್ತದೆ ಎಂದು ತಿಳಿಸಿದರು.

ಶಿಷ್ಟಾಚಾರದನ್ವಯ ಆಮಂತ್ರಣ ಪತ್ರಿಕೆ ಮುದ್ರಣಕ್ಕೆ ಕ್ರಮ ಕೈಗೊಳ್ಳಬೇಕು. ಶಿವಶರಣೆ ಶ್ರೀ ಹೇಮರೆಡ್ಡಿ ಮಲ್ಲಮ್ಮ ಅವರ ಕುರಿತು ಆಳವಾಗಿ ಅಧ್ಯಯನ ಮಾಡಿದವರಿಂದ ಉಪನ್ಯಾಸ ಕಾರ್ಯಕ್ರಮವೂ ನಡೆಯಲಿದೆ. ಒಟ್ಟಾರೆಯಾಗಿ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ಅವರು ನಿರ್ದೇಶನ ನೀಡಿದರು.

ಸಭೆಯಲ್ಲಿ ಊಟೋಪಹಾರ ವ್ಯವಸ್ಥೆ, ವೇದಿಕೆ ನಿರ್ಮಾಣ, ಅಲಂಕಾರ, ಬ್ಯಾನರ್ ಅಳವಡಿಕೆ ಹಾಗೂ ಪುಸ್ತಕ ಬಿಡುಗಡೆ ಕುರಿತು ಚರ್ಚಿಸಲಾಯಿತು. ಸಭೆಯಲ್ಲಿ ಡಿವೈಎಸ್ಪಿ ಮಹಾಂತೇಶ್ ಸಜ್ಜನ, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಅಧಿಕ್ಷಕರು ರಾಜಕುಮಾರ ಸೊಪ್ಪಡ್ಲ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಸಮಾಜದ ಮುಖಂಡರು ಹಾಗೂ ಮಹಿಳೆಯರು ಉಪಸ್ಥಿತರಿದ್ದರು.

# ಆರೋಗ್ಯದ ಬಗ್ಗೆ ಜಾಗೃತಿ ಅಗತ್ಯ

**ಚರ್ಮರೋಗ, ಸಕ್ಕರೆ ಕಾಯಿಲೆ ಹಾಗೂ ಸ್ತನ ಕ್ಯಾನ್ಸರ್ ಕುರಿತು ಅರಿವು ಮೂಡಿಸಲು ಡಾ. ರಚನಾ ಕರೆ**



■ವಿಜಯಸಾಕ್ಷಿ ಸುದ್ದಿ, ಗದಗ

ಚರ್ಮರೋಗ, ಸಕ್ಕರೆ ಕಾಯಿಲೆ ಹಾಗೂ ಮಹಿಳೆಯರಲ್ಲಿ ಸ್ತನ ಕ್ಯಾನ್ಸರ್ ಕುರಿತು ಸಮರ್ಪಕ ತಿಳಿವಳಿಕೆ ಹೊಂದಿರುವುದು ಅತ್ಯಂತ ಅಗತ್ಯವಾಗಿದೆ. ಇವು ಇಂದಿನ ಸಮಾಜದಲ್ಲಿ ಹೆಚ್ಚಾಗಿ ಕಂಡುಬರುವ ಗಂಭೀರ ಆರೋಗ್ಯ ಸಮಸ್ಯೆಗಳಾಗಿದ್ದು, ಅರಿವು ಕೊರತೆಯಿಂದಾಗಿ ಅವು ತೀವ್ರವಾಗುತ್ತಿವೆ ಎಂದು ಚರ್ಮರೋಗ ತಜ್ಞೆ ಡಾ. ರಚನಾ ಸುಖೇತ ದಾಡಿಬಾವಿ ಹೇಳಿದರು.

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಮಹಿಳಾ ಘಟಕದಿಂದ ಲಿಂ. ಶ್ರೀಮತಿ ಈರಮ್ಮ ಚಂದ್ರಶೇಖರಯ್ಯ ಧನ್ನೂರಹಿರೇಮಠ ಅವರ ಸ್ಮರಣಾರ್ಥ ಆಯೋಜಿಸಿದ್ದ ದತ್ತಿ ಉಪನ್ಯಾಸ ಅಂಗವಾಗಿ ನಡೆದ ಆರೋಗ್ಯ ವಿಚಾರ ಸಂಕಿರಣವನ್ನು ಉದ್ಘಾಟಿಸಿ ಮಾತನಾಡಿದ ಅವರು, ಚರ್ಮರೋಗಗಳು ಬ್ಯಾಕ್ಟೀರಿಯಾ, ವೈರಸ್, ಫಂಗಸ್ ಸೇರಿದಂತೆ ವಿವಿಧ ಸೂಕ್ಷ್ಮಾಣುಗಳಿಂದ ಉಂಟಾಗುತ್ತವೆ. ಸ್ವಚ್ಛತೆ ಕೊರತೆ, ಅಶುದ್ಧ ನೀರು ಹಾಗೂ ಆಹಾರ ಸೇವನೆ ಇವುಗಳ ಪ್ರಮುಖ ಕಾರಣಗಳಾಗಿವೆ. ದಿನನಿತ್ಯ ಸ್ನಾನ, ಕೈಗಳನ್ನು ಸಾಬೂನಿನಿಂದ ತೊಳೆಯುವುದು ಹಾಗೂ ಶುದ್ಧ ಆಹಾರ ಸೇವನೆ ಮೂಲಕ ಚರ್ಮರೋಗಗಳನ್ನು ತಡೆಯಬಹುದು ಎಂದು ತಿಳಿಸಿದರು. ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಕೆ.ಎಚ್. ಪಾಟೀಲ ವೈದ್ಯಕೀಯ ವಿಜ್ಞಾನ ಸಂಸ್ಥೆಯ ಜನರಲ್ ಮೆಡಿಸಿನ್ ಸಹ ಪ್ರಾಧ್ಯಾಪಕಿ ಡಾ. ಸ್ನೇಹಾ ಪಾಟೀಲ ಯೇನಗಿ ಮಾತನಾಡಿ, ಸಕ್ಕರೆ ಕಾಯಿಲೆ ಇಂದಿನ ದಿನಗಳಲ್ಲಿ ಸಾಮಾನ್ಯವಾಗಿದ್ದು, ದೇಹದಲ್ಲಿ ಇನ್ಸುಲಿನ್ ಕೊರತೆ ಅಥವಾ ಅದರ ಕಾರ್ಯಕ್ಷಮತೆ ಕುಂದುವುದರಿಂದ ಉಂಟಾಗುತ್ತದೆ. ಹೆಚ್ಚು ದಾಹ, ಮಲಮೂತ್ರ ವಿಸರ್ಜನೆ, ತೂಕ ಇಳಿಕೆ, ದಣಿವು ಇವು ಲಕ್ಷಣಗಳಾಗಿದ್ದು, ತಕ್ಷಣ ವೈದ್ಯರನ್ನು ಸಂಪರ್ಕಿಸಬೇಕು. ನಿಯಮಿತ ವ್ಯಾಯಾಮ, ಸಮತೋಲನ ಆಹಾರ ಮತ್ತು ಒತ್ತಡ ನಿಯಂತ್ರಣದಿಂದ ಕಾಯಿಲೆಯನ್ನು ನಿಯಂತ್ರಿಸಬಹುದು ಎಂದು ತಿಳಿಸಿದರು.

> "ಅರಿವು ಮತ್ತು ಮುನ್ನೆಚ್ಚರಿಕೆ ಇದ್ದರೆ ಗಂಭೀರ ಕಾಯಿಲೆಗಳನ್ನು ನಿಯಂತ್ರಿಸುವುದು ಸಾಧ್ಯ"
>
> – ಡಾ. ರಚನಾ ಸುಖೇತ ದಾಡಿಬಾವಿ

ಸ್ತನ ಕ್ಯಾನ್ಸರ್ ಕುರಿತು ಮಾತನಾಡಿದ ಅವರು, ಇದು ಮಹಿಳೆಯರಲ್ಲಿ ಗಂಭೀರ ಸಮಸ್ಯೆಯಾಗಿದ್ದು, ಆರಂಭಿಕ ಹಂತದಲ್ಲೇ ಪತ್ತೆ ಹಚ್ಚಿದರೆ ಚಿಕಿತ್ಸೆ ಸಾಧ್ಯ. ಸ್ತನದಲ್ಲಿ ಗಡ್ಡೆ, ಚರ್ಮದ ಬದಲಾವಣೆ, ನೋವು ಇತ್ಯಾದಿ ಲಕ್ಷಣಗಳನ್ನು ನಿರ್ಲಕ್ಷಿಸಬಾರದು. ಮಹಿಳೆಯರು ಸ್ವಯಂ ಪರೀಕ್ಷೆ ಮತ್ತು ವೈದ್ಯಕೀಯ ತಪಾಸಣೆಗಳನ್ನು ನಿಯಮಿತವಾಗಿ ಮಾಡಿಸಿಕೊಳ್ಳಬೇಕು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮಹಿಳಾ ಘಟಕದ ಅಧ್ಯಕ್ಷೆ ಶ್ರೀಮತಿ ಜ್ಯೋತಿ ರಾಮನಗೌಡ ದಾನಪ್ಪಗೌಡ್ರ ಮಾತನಾಡಿ, ಮಹಿಳೆಯರು ಆರೋಗ್ಯದ ಬಗ್ಗೆ ಹೆಚ್ಚಿನ ಜಾಗೃತಿ ವಹಿಸುವುದು ಅತ್ಯಗತ್ಯ ಎಂದರು.

ಕಾರ್ಯಕ್ರಮದಲ್ಲಿ ಪ್ರಾರ್ಥನೆಯನ್ನು ಸುಷ್ಮಾ ಎಸ್. ಜಾಲಿ ನೆರವೇರಿಸಿದರು. ದಾನಯ್ಯ ವೀರಯ್ಯ ಗಣಾಚಾರಿ ಪ್ರಾಸ್ತಾವಿಕ ನುಡಿಗಳನ್ನಾಡಿ, ಈರಮ್ಮ ಅವರ ಪರಿಚಯ ಮಾಡಿಸಿದರು. ನಂದಾ ಚಂದ್ರು ಬಾಳಿಹಳ್ಳಿಮಠ ಅತಿಥಿಗಳ ಪರಿಚಯ ಮಾಡಿದರು. ಪೂರ್ಣಿಮಾ ಕೆ. ಆಟದ ಕಾರ್ಯಕ್ರಮ ನಿರೂಪಿಸಿದರು. ಕೊನೆಯಲ್ಲಿ ರೇಣುಕಾ ಲಿಂಗರಾಜ ಅಮಾತ್ಯ ವಂದನಾರ್ಪಣೆ ಸಲ್ಲಿಸಿದರು. ಮಹಿಳಾ ಘಟಕದ ಸದಸ್ಯರು ಹಾಗೂ ಗಣ್ಯರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

## ಎಸ್‌ಜೆಜೆಎಂ ಸಂಯುಕ್ತ ಪಿಯು ಕಾಲೇಜು ಪ್ರೌಢಶಾಲೆಗೆ ಉತ್ತಮ ಎಸ್‌ಎಸ್‌ಎಲ್‌ಸಿ ಫಲಿತಾಂಶ





■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪಟ್ಟಣದ ಎಸ್‌ಜೆಜೆಎಂ ಸಂಯುಕ್ತ ಪದವಿ ಪೂರ್ವ ಮಹಾವಿದ್ಯಾಲಯದ ಪ್ರೌಢಶಾಲೆಯ 2025–26ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ವಿದ್ಯಾರ್ಥಿಗಳು ಉತ್ತಮ ಸಾಧನೆ ಮಾಡಿ ಶಾಲೆಗೆ ಕೀರ್ತಿ ತಂದಿದ್ದಾರೆ.

ಪರಶುರಾಮ ಟೋಪಣ್ಣವರ ಅವರು ಶೇ.94.08 ಅಂಕಗಳನ್ನು ಪಡೆದು ಪ್ರಥಮ ಸ್ಥಾನ ಗಳಿಸಿದ್ದಾರೆ. ಪ್ರಿಯಾಂಕಾ ಸುಂಕಾಪೂರ ಅವರು ಶೇ.89.28 ಅಂಕಗಳೊಂದಿಗೆ ದ್ವಿತೀಯ ಸ್ಥಾನ ಪಡೆದರೆ, ಸಹನಾ ಪಲ್ಲೇದ ಅವರು ಶೇ.88 ಅಂಕಗಳೊಂದಿಗೆ ತೃತೀಯ ಸ್ಥಾನ ಪಡೆದಿದ್ದಾರೆ.

ವಿದ್ಯಾರ್ಥಿಗಳ ಈ ಸಾಧನೆಗೆ ಶಾಲೆಯ ಪ್ರಧಾನ ಗುರು ಇ.ಎಂ. ಗುಳೆದಗುಡ್ಡ ಹಾಗೂ ಸಿಬ್ಬಂದಿ ವರ್ಗ ಅಭಿನಂದನೆ ವ್ಯಕ್ತಪಡಿಸಿದ್ದಾರೆ.

"ವಿದ್ಯಾರ್ಥಿಗಳ ಪರಿಶ್ರಮ ಮತ್ತು ಶಿಕ್ಷಕರ ಮಾರ್ಗದರ್ಶನದಿಂದ ಈ ಸಾಧನೆ ಸಾಧ್ಯವಾಗಿದೆ" ಎಂದು ಶಾಲಾ ಆಡಳಿತ ಮಂಡಳಿ ಸಂತೋಷ ವ್ಯಕ್ತಪಡಿಸಿದೆ.

## ಆ್ಯಂಗ್ಲೋ ಉರ್ದು ಬಾಲಕರ ಪ್ರೌಢಶಾಲೆಯ ಉತ್ತಮ ಫಲಿತಾಂಶ





■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಆ್ಯಂಗ್ಲೋ ಉರ್ದು ಬಾಲಕರ ಪ್ರೌಢಶಾಲೆಯ 2025–26ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಫಲಿತಾಂಶ ಸುಧಾರಿತಗೊಂಡಿದೆ ಎಂದು ಮುಖ್ಯಶಿಕ್ಷಕ ಎಂ. ಎ. ರಿಕಾರ್ಟಿ ತಿಳಿಸಿದ್ದಾರೆ.

ಶಾಲೆಯ ಮುಸೇಬ ನಾಗರದಿನ್ನಿ ಅವರು 356 ಅಂಕಗಳನ್ನು ಪಡೆದು ಶೇ.56.96ರೊಂದಿಗೆ ಪ್ರಥಮ ಸ್ಥಾನ ಪಡೆದಿದ್ದಾರೆ. ಸೋಹೇಲ್ ಬಾಗೇವಾಡಿ ಅವರು 351 ಅಂಕಗಳೊಂದಿಗೆ ಶೇ.56.16 ಪಡೆದು ದ್ವಿತೀಯ ಸ್ಥಾನ ಪಡೆದರೆ, ಇಬ್ರಾಹಿಂ ಮುಳಗುಂದ ಅವರು 327 ಅಂಕಗಳೊಂದಿಗೆ ಶೇ.52.16 ಪಡೆದು ತೃತೀಯ ಸ್ಥಾನ ಪಡೆದಿದ್ದಾರೆ.

ಶಾಲೆಯಿಂದ ಪರೀಕ್ಷೆಗೆ ಹಾಜರಾದ ಒಟ್ಟು 31 ವಿದ್ಯಾರ್ಥಿಗಳಲ್ಲಿ 18 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದು, ಒಟ್ಟು ಫಲಿತಾಂಶ ಶೇ.58.06 ದಾಖಲಾಗಿದೆ.

"ಈ ಬಾರಿ ಫಲಿತಾಂಶದಲ್ಲಿ ಸುಧಾರಣೆ ಕಂಡುಬಂದಿದ್ದು, ಮುಂದಿನ ವರ್ಷ ಇನ್ನಷ್ಟು ಉತ್ತಮ ಸಾಧನೆ ಮಾಡಲು ಪ್ರಯತ್ನಿಸಲಾಗುತ್ತದೆ" ಎಂದು ಮುಖ್ಯಶಿಕ್ಷಕ ಎಂ. ಎ. ರಿಕಾರ್ಟಿ ತಿಳಿಸಿದ್ದಾರೆ.

## ಮೊರಾರ್ಜಿ ದೇಸಾಯಿ ವಸತಿ ಶಾಲೆಗೆ ಶೇ.100 ಎಸ್‌ಎಸ್‌ಎಲ್‌ಸಿ ಫಲಿತಾಂಶ





■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಒಡೆಯರ ಮಲ್ಲಾಪುರದ ಮೊರಾರ್ಜಿ ದೇಸಾಯಿ ವಸತಿ ಶಾಲೆ (ಆಂಗ್ಲ ಮಾಧ್ಯಮ) 2025–26ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶೇ.100 ಫಲಿತಾಂಶ ಸಾಧಿಸಿ ಗಮನಾರ್ಹ ಸಾಧನೆ ಮಾಡಿದೆ.

ಶಾಲೆಯ ವಿದ್ಯಾರ್ಥಿ ದೀಪಕ ಅಂಗಡಿ ಅವರು ಶೇ.97 ಅಂಕಗಳನ್ನು ಪಡೆದು ಪ್ರಥಮ ಸ್ಥಾನ ಗಳಿಸಿದ್ದಾರೆ. ಅಂಜಲಿ ಕರಿಯತ್ತಿನ ಅವರು ಶೇ.96.5 ಅಂಕಗಳೊಂದಿಗೆ ದ್ವಿತೀಯ ಸ್ಥಾನ ಪಡೆದರೆ, ಗಾಯತ್ರಿ ಮಾಗಡಿ ಅವರು ಶೇ.95 ಅಂಕಗಳೊಂದಿಗೆ ತೃತೀಯ ಸ್ಥಾನ ಪಡೆದಿದ್ದಾರೆ.

ಪರೀಕ್ಷೆ ಬರೆದ ಒಟ್ಟು 50 ವಿದ್ಯಾರ್ಥಿಗಳಲ್ಲಿ 30 ಕ್ಕೂ ಹೆಚ್ಚು ವಿದ್ಯಾರ್ಥಿಗಳು ಡಿಸ್ಟಿಂಕ್ಷನ್‌ನಲ್ಲಿ ಉತ್ತೀರ್ಣರಾಗಿರುವುದು ಶಾಲೆಯ ಸಾಧನೆಗೆ ಮತ್ತಷ್ಟು ಕೀರ್ತಿ ತಂದಿದೆ.

"ವಿದ್ಯಾರ್ಥಿಗಳ ಪರಿಶ್ರಮ ಮತ್ತು ಶಿಕ್ಷಕರ ಮಾರ್ಗದರ್ಶನದಿಂದ ಶೇ.100 ಫಲಿತಾಂಶ ಸಾಧ್ಯವಾಗಿದೆ" ಎಂದು ಶಾಲಾ ಅಧಿಕಾರಿ ವರ್ಗ ಹಾಗೂ ಶಿಕ್ಷಕ ವೃಂದ ಹರ್ಷ ವ್ಯಕ್ತಪಡಿಸಿದೆ.

## ಸರಕಾರಿ ಪ್ರೌಢಶಾಲೆ (ಆರ್‌ಎಂಎಸ್‌ಎ)ಗೆ ಶೇ.100 ಫಲಿತಾಂಶ





■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪಟ್ಟಣದ ಸರಕಾರಿ ಪ್ರೌಢಶಾಲೆ (ಆರ್‌ಎಂಎಸ್‌ಎ) 2025–26ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶೇ.100 ಫಲಿತಾಂಶ ಸಾಧಿಸಿ ಗಮನಾರ್ಹ ಸಾಧನೆ ಮಾಡಿದೆ.

ಸಂತೋಷ ವಡ್ಡರ ಅವರು 553 ಅಂಕಗಳನ್ನು ಪಡೆದು ಶೇ.88.48ರೊಂದಿಗೆ ಪ್ರಥಮ ಸ್ಥಾನ ಗಳಿಸಿದ್ದಾರೆ. ಸುಮಾ ಹರ್ತಿ ಅವರು 551 ಅಂಕಗಳೊಂದಿಗೆ ಶೇ.88.16 ಪಡೆದು ದ್ವಿತೀಯ ಸ್ಥಾನ ಪಡೆದಿದ್ದಾರೆ. ಶಾಂಭವಿ ಸುಂಕಾಪೂರ ಅವರು 546 ಅಂಕಗಳೊಂದಿಗೆ ಶೇ.87.36 ಪಡೆದು ತೃತೀಯ ಸ್ಥಾನ ಗಳಿಸಿದ್ದಾರೆ.

ವಿದ್ಯಾರ್ಥಿಗಳ ಈ ಸಾಧನೆಗೆ ಶಾಲೆಯ ಪ್ರಧಾನ ಗುರು ಎಸ್. ಎಚ್. ಪೂಜಾರ ಹಾಗೂ ಸಿಬ್ಬಂದಿ ವರ್ಗ ಅಭಿನಂದನೆ ವ್ಯಕ್ತಪಡಿಸಿದ್ದಾರೆ.

"ವಿದ್ಯಾರ್ಥಿಗಳ ಶ್ರಮ ಮತ್ತು ಶಿಕ್ಷಕರ ಸಮರ್ಪಿತ ಮಾರ್ಗದರ್ಶನದಿಂದ ಶೇ.100 ಫಲಿತಾಂಶ ಸಾಧ್ಯವಾಗಿದೆ" ಎಂದು ಶಾಲಾ ಆಡಳಿತ ಮಂಡಳಿ ತಿಳಿಸಿದೆ.

**ಬಿ.ಎಂ.ಎಸ್ ಆಂಗ್ಲ ಮಾಧ್ಯಮ ಶಾಲೆಗೆ ಉತ್ತಮ ಎಸ್‌ಎಸ್‌ಎಲ್‌ಸಿ ಫಲಿತಾಂಶ**

## ಪೂಜಾ ಸಿದ್ದನಗೌಡರ ಪ್ರಥಮ; ದಾನೇಶ್ವರಿ, ಮುಸ್ಕಾನಗೆ ಕ್ರಮವಾಗಿ ದ್ವಿತೀಯ-ತೃತೀಯ ಸ್ಥಾನ





■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪಟ್ಟಣದ ಬಿ.ಎಂ.ಎಸ್ ಆಂಗ್ಲ ಮಾಧ್ಯಮ ಪ್ರೌಢಶಾಲೆಯ 2025–26ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ವಿದ್ಯಾರ್ಥಿಗಳು ಉತ್ತಮ ಸಾಧನೆ ಮಾಡಿ ಶಾಲೆಗೆ ಕೀರ್ತಿ ತಂದಿದ್ದಾರೆ. ಶಾಲೆಯ ಪೂಜಾ ಸಿದ್ದನಗೌಡರ ಅವರು ಶೇ.92.96 ಅಂಕಗಳನ್ನು ಗಳಿಸಿ ಪ್ರಥಮ ಸ್ಥಾನ ಪಡೆದಿದ್ದಾರೆ. ದಾನೇಶ್ವರಿ ಅರಳಿ ಶೇ.87.52 ಅಂಕಗಳೊಂದಿಗೆ ದ್ವಿತೀಯ ಸ್ಥಾನ ಪಡೆದರೆ, ಮುಸ್ಕಾನ ನದ್ದಿಮುಲ್ಲಾ ಶೇ.85.76 ಅಂಕಗಳೊಂದಿಗೆ ತೃತೀಯ ಸ್ಥಾನ ಪಡೆದಿದ್ದಾರೆ.

ವಿದ್ಯಾರ್ಥಿಗಳ ಈ ಸಾಧನೆಗೆ ಶಾಲೆಯ ಪ್ರಧಾನ ಗುರುಮಾತೆ ಫಾತೀಮಾ ಖವಾಸ ಹಾಗೂ ಸಿಬ್ಬಂದಿ ವರ್ಗ ಅಭಿನಂದನೆ ವ್ಯಕ್ತಪಡಿಸಿದ್ದಾರೆ.

"ವಿದ್ಯಾರ್ಥಿಗಳ ಪರಿಶ್ರಮ ಮತ್ತು ಶಿಕ್ಷಕರ ಮಾರ್ಗದರ್ಶನದಿಂದ ಈ ಸಾಧನೆ ಸಾಧ್ಯವಾಗಿದೆ" ಎಂದು ಶಾಲಾ ಆಡಳಿತ ಮಂಡಳಿ ಸಂತೋಷ ವ್ಯಕ್ತಪಡಿಸಿದೆ.

## ಶ್ರದ್ಧಾ ಟ್ರಸ್ಟ್‌ನಲ್ಲಿ ಬಸವ ಜಯಂತಿ ಆಚರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಶ್ರದ್ಧಾ ಸ್ವರ ಸಂಗೀತ ವೆಲ್ಫೇರ್ ಟ್ರಸ್ಟ್ ವತಿಯಿಂದ ಬಸವ ಜಯಂತಿ ಅಂಗವಾಗಿ ವಿಶೇಷ ಸಂಗೀತ ಕಾರ್ಯಕ್ರಮವನ್ನು ಭಕ್ತಿಭಾವದಿಂದ ಹಾಗೂ ಸಂಭ್ರಮದಿಂದ ಆಚರಿಸಲಾಯಿತು.

ಕಾರ್ಯಕ್ರಮವು ಬಸವಣ್ಣ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವ ಮೂಲಕ ಆರಂಭಗೊಂಡಿತು. ಬಳಿಕ ವಿದ್ಯಾರ್ಥಿಗಳು ಬಸವಣ್ಣನವರ ವಚನಗಳು, ಭಕ್ತಿಗೀತೆಗಳು ಹಾಗೂ ವಿವಿಧ ಸಂಗೀತ ಕಾರ್ಯಕ್ರಮಗಳ ಮೂಲಕ ಎಲ್ಲರ ಮನಸೂರೆಗೊಂಡರು.

ಈ ಸಂದರ್ಭದಲ್ಲಿ ವಸಂತ ಹಲಗಿ ಮಾತನಾಡಿ, ಬಸವಣ್ಣನವರ ಸಮಾನತೆ, ಶ್ರಮದ ಮಹತ್ವ, ಸತ್ಯನಿಷ್ಠೆ ಹಾಗೂ ಮಾನವೀಯ ಮೌಲ್ಯಗಳ ಬಗ್ಗೆ ಉಪಸ್ಥಿತರಿಗೆ ವಿವರಿಸಿದರು. ಮಕ್ಕಳಲ್ಲಿ ಸಂಸ್ಕಾರ, ಸಮಾಜಮುಖಿ ಚಿಂತನೆ ಹಾಗೂ ಸಂಗೀತದ ಆಸಕ್ತಿ ಬೆಳೆಸುವ ಉದ್ದೇಶದಿಂದ ಈ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.


ಪುಟ್ಟ ಮಕ್ಕಳಾದ ಧೃತಿ, ಕೃಷಾಂಕ, ತನ್ವಿ, ಪ್ರಥಮ, ಚಿರಸ್ವಿ ಹಾಗೂ ಪರಮ ಅವರು ಬಸವಣ್ಣನವರ ವೇಷ ಧರಿಸಿ ಗಮನಸೆಳೆದರು. ಕಾರ್ಯಕ್ರಮದಲ್ಲಿ ಕಾರ್ಯದರ್ಶಿ ಉಜ್ವಲ್ ದ ಕಬಾಡಿ, ಸಂತೋಷ ಅಸುಂಡಿ, ರೇಷಾ ಕಲ್ಕಂಬಿ, ವಿಶಾಲಾ ದ ಕಬಾಡಿ, ಪೋಷಕರು ಹಾಗೂ ಅನೇಕ ಗಣ್ಯರು ಭಾಗವಹಿಸಿ ಮಕ್ಕಳ ಪ್ರತಿಭೆಯನ್ನು ಮೆಚ್ಚುಗೆ ವ್ಯಕ್ತಪಡಿಸಿದರು.

"ಮಕ್ಕಳಲ್ಲಿ ಸಂಸ್ಕಾರ ಹಾಗೂ ಸಂಗೀತದ ಆಸಕ್ತಿ ಬೆಳೆಸುವ ಉದ್ದೇಶದಿಂದ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ" ಎಂದು ವಸಂತ ಹಲಗಿ ಹೇಳಿದರು.

ಕಾರ್ಯಕ್ರಮ ಯಶಸ್ವಿಯಾಗಿ ನೆರವೇರಿದ ಹಿನ್ನೆಲೆಯಲ್ಲಿ ಸಂಸ್ಥೆಯ ಅಧ್ಯಕ್ಷರಾದ ಜ್ಯೋತಿ ಉಜ್ವಲ್ ಕಬಾಡಿ ಅವರು ಎಲ್ಲರಿಗೂ ಕೃತಜ್ಞತೆ ಸಲ್ಲಿಸಿದರು.





## ವಿದ್ಯಾಪೀಠ ಶಾಲೆಗೆ ಶೇ.100 ಎಸ್‌ಎಸ್‌ಎಲ್‌ಸಿ ಫಲಿತಾಂಶ- ಕಮಲಾಕ್ಷಿ ಮೇಟಿ ರಾಜ್ಯಕ್ಕೆ 8ನೇ ರ‍್ಯಾಂಕ್






■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ವಿದ್ಯಾಪೀಠ ಶಾಲೆಯ ಎಸ್‌ಎಸ್‌ಎಲ್‌ಸಿ ಫಲಿತಾಂಶ ಶೇ.100 ದಾಖಲಾಗಿದೆ. ಒಟ್ಟು ಪರೀಕ್ಷೆ ಬರೆದ 47 ವಿದ್ಯಾರ್ಥಿಗಳಲ್ಲಿ 30 ವಿದ್ಯಾರ್ಥಿಗಳು ಶೇ.90ಕ್ಕಿಂತ ಹೆಚ್ಚು ಅಂಕಗಳನ್ನು ಗಳಿಸಿದ್ದಾರೆ.

ಶಾಲೆಯ ವಿದ್ಯಾರ್ಥಿನಿ ಕು. ಕಮಲಾಕ್ಷಿ ಮೇಟಿ 618 ಅಂಕ (ಶೇ.98.24%) ಗಳಿಸಿ ರಾಜ್ಯಕ್ಕೆ 8ನೇ ರ‍್ಯಾಂಕ್ ಪಡೆದು ಶಾಲೆಗೆ ಕೀರ್ತಿ ತಂದಿದ್ದಾಳೆ. ಪ್ರತೀಕ್ಷಾ ಯಾಕನಾಳ ಶೇ.98, ಸೌಮ್ಯಾ ಪ್ಯಾಟಿ ಶೇ.98, ಅಮೃತಾ ಸಾತಪುತೆ ಶೇ.98, ಸಿಂಚನಾ ಕಟ್ಟೆಣ್ಣವರ ಶೇ.98, ಧ್ರುವರಾಜ ಟಿ ಶೇ.98, ಪೃಥ್ವಿರಾಜ ಪಿ ಶೇ.98, ಸುದೀಕ್ಷ ಜಿ ಶೇ.98, ಪೂರ್ವಿ ಎಸ್ ಶೇ.97, ಆಕಾಂಕ್ಷಾ ಪಿ ಶೇ.97 ಅಂಕಗಳನ್ನು ಗಳಿಸಿ ಗಮನಾರ್ಹ ಸಾಧನೆ ಮಾಡಿದ್ದಾರೆ.

ವಿದ್ಯಾರ್ಥಿಗಳ ಈ ಸಾಧನೆಗೆ ಶಾಲಾಡಳಿತ ಮಂಡಳಿ ಹಾಗೂ ಶಿಕ್ಷಕ ವೃಂದ ಹರ್ಷ ವ್ಯಕ್ತಪಡಿಸಿದೆ.

## ಸಮಗ್ರ ಜಲ ಸಂಪನ್ಮೂಲ ನಿರ್ವಹಣೆಗೆ ಅಭಿಯಂತರರಿಗೆ ಕಡ್ಡಾಯ ತರಬೇತಿ ಆರಂಭ



■ವಿಜಯಸಾಕ್ಷಿ ಸುದ್ದಿ, ಧಾರವಾಡ

ಜಲ ಮತ್ತು ನೆಲ ನಿರ್ವಹಣೆ ಸಂಸ್ಥೆ (ವಾಲ್ಮಿ)ಯಲ್ಲಿ ಜಲ ಸಂಪನ್ಮೂಲ ಇಲಾಖೆಯಲ್ಲಿ ಹೊಸದಾಗಿ ನೇಮಕಗೊಂಡ ಅಭಿಯಂತರರಿಗೆ 'ಸಮಗ್ರ ಜಲ ಸಂಪನ್ಮೂಲ ನಿರ್ವಹಣೆ' ಕುರಿತು 30 ದಿನಗಳ ಕಡ್ಡಾಯ ತರಬೇತಿ ಕಾರ್ಯಕ್ರಮವನ್ನು ಬುಧವಾರ ಉದ್ಘಾಟಿಸಲಾಯಿತು.

ಕಾರ್ಯಕ್ರಮವನ್ನು ಮಹಾತ್ಮಾ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಉಪಕುಲಪತಿ ಪ್ರೊ. ಡಾ. ಸುರೇಶ ವಿ. ನಾಡಗೌಡ ಉದ್ಘಾಟಿಸಿ ಮಾತನಾಡಿ, ಗ್ರಾಮೀಣಾಭಿವೃದ್ಧಿ ಮತ್ತು ಜಲ ಸಂಪನ್ಮೂಲ ಇಲಾಖೆಗಳ ನಡುವೆ ನೇರ ಸಂಬಂಧವಿದ್ದು, ಅಭಿಯಂತರರು ತರಬೇತಿಯ ಮೂಲಕ ಜ್ಞಾನ ಮತ್ತು ಕೌಶಲ್ಯವನ್ನು ಅಭಿವೃದ್ಧಿಪಡಿಸಿಕೊಂಡು ಸಮರ್ಪಕ ನೀರಾವರಿ ಯೋಜನೆಗಳನ್ನು ಅನುಷ್ಠಾನಗೊಳಿಸಬೇಕು ಎಂದು ಕರೆ ನೀಡಿದರು. ಜೊತೆಗೆ ನೀರು ಬಳಕೆದಾರರ ಸಹಕಾರ ಸಂಘಗಳನ್ನು ಬಲವರ್ಧನೆಗೊಳಿಸಲು ಮುಂದಾಗಬೇಕು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ವಾಲ್ಮಿ ನಿರ್ದೇಶಕ ಡಾ. ಗಿರೀಶ್ ಎನ್. ಮರಡ್ಡಿ ಮಾತನಾಡಿ, ಅಭಿಯಂತರರಿಗೆ ಕಚೇರಿ ನಿರ್ವಹಣೆ, ನೀರು ನಿರ್ವಹಣೆ, ವಾರಾಬಂದಿ ಪದ್ಧತಿ, ಭೂಸ್ವಾಧೀನ ಪ್ರಕ್ರಿಯೆ, ನ್ಯಾಯಾಂಗ ಪ್ರಕರಣಗಳ ನಿರ್ವಹಣೆ, ನೀರಾವರಿ ಕಾಯ್ದೆಗಳು, ಆಣೆಕಟ್ಟು ನಿರ್ವಹಣೆ, ಟೆಂಡರ್ ಪ್ರಕ್ರಿಯೆ ಸೇರಿದಂತೆ ವಿವಿಧ ವಿಷಯಗಳಲ್ಲಿ ನುರಿತ ಸಂಪನ್ಮೂಲ ವ್ಯಕ್ತಿಗಳಿಂದ ತರಬೇತಿ ನೀಡಲಾಗುತ್ತದೆ ಎಂದರು.

ಕಾರ್ಯಕ್ರಮ ಸಂಯೋಜಕ ಇಂ. ಬಿ. ವೈ. ಬಂಡಿವಡ್ಡರ ಪ್ರಾಸ್ತಾವಿಕವಾಗಿ ಮಾತನಾಡಿ, ಹೊಸದಾಗಿ ನೇಮಕಗೊಂಡ ಅಭಿಯಂತರರು ಈ ತರಬೇತಿಯನ್ನು ಕಡ್ಡಾಯವಾಗಿ ಪಡೆದು ದಕ್ಷತೆಯನ್ನು ಹೆಚ್ಚಿಸಿಕೊಳ್ಳಬೇಕು ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಸಹ ಸಂಯೋಜಕರಾದ ಇಂ. ಪ್ರಕಾಶ ಕಾತರಕಿ, ಇಂ. ಸದಾಶಿವ ಸೇರಿದಂತೆ ಅನೇಕ ಅಧಿಕಾರಿಗಳು ಉಪಸ್ಥಿತರಿದ್ದರು. ಇಂ. ಪ್ರದೀಪ ದೇವರಮನಿ ಸ್ವಾಗತಿಸಿದರು, ಇಂ. ಅನಿಲಕುಮಾರ ಎನ್. ಮಸಳಿ ವಂದಿಸಿದರು. ಶ್ರೀಮತಿ ಅನುರಾಧಾ ಮಳಗಿ ಕಾರ್ಯಕ್ರಮ ನಿರ್ವಹಿಸಿದರು. ಕಾರ್ಯಕ್ರಮದಲ್ಲಿ 60ಕ್ಕೂ ಹೆಚ್ಚು ಅಭಿಯಂತರರು ಹಾಗೂ ಸಿಬ್ಬಂದಿ ವರ್ಗದವರು ಭಾಗವಹಿಸಿದರು.

# ವಿಕೇಂದ್ರೀಕರಣವೇ ಗ್ರಾಮಾಭಿವೃದ್ಧಿಗೆ ದಿಕ್ಕು

## ರಾಷ್ಟ್ರೀಯ ಪಂಚಾಯತ್ ರಾಜ್ ದಿನಾಚರಣೆ: ಚುನಾವಣೆ ವಿಳಂಬದ ವಿರುದ್ಧ ಧ್ವನಿ ಎತ್ತಲು ಡಿ ಆರ್ ಪಾಟೀಲ ಕರೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಪಂಚಾಯತ್ ರಾಜ್ ವ್ಯವಸ್ಥೆಯನ್ನು ಬಲಪಡಿಸುವ ಮೂಲಕವೇ ಗ್ರಾಮಾಭಿವೃದ್ಧಿಗೆ ನಿಜವಾದ ದಿಕ್ಕು ಸಿಗುತ್ತದೆ ಎಂದು ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಡಿ.ಆರ್. ಪಾಟೀಲ ಅಭಿಪ್ರಾಯಪಟ್ಟರು.

ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ್ ಸಂಯುಕ್ತ ಆಶ್ರಯದಲ್ಲಿ ನಗರದ ಆಡಿಟೋರಿಯಂ ಸಭಾಂಗಣದಲ್ಲಿ ಶುಕ್ರವಾರ ನಡೆದ ರಾಷ್ಟ್ರೀಯ ಪಂಚಾಯತ್ ರಾಜ್ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪಂಚಾಯತ್ ರಾಜ್ ದಿನವನ್ನು ಪಂಚಾಯತ್‌ಗಳ "ಹುಟ್ಟುಹಬ್ಬ"ದಂತೆ ಅರ್ಥಪೂರ್ಣವಾಗಿ ಆಚರಿಸಬೇಕು ಎಂದು ಹೇಳಿದ ಅವರು, ಹಿಂದಿನ ದಿನಗಳಲ್ಲಿ ಪಂಚಾಯತ್ ವ್ಯವಸ್ಥೆಗೆ ನೀಡಿದ್ದ ಅಧಿಕಾರಗಳನ್ನು ಸಮರ್ಪಕವಾಗಿ ಚಲಾಯಿಸಲು ಅವಕಾಶವಿತ್ತು ಎಂದರು. ತಾಲೂಕು ಹಾಗೂ ಜಿಲ್ಲಾ ಪಂಚಾಯತ್ ಚುನಾವಣೆಗಳನ್ನು ನಡೆಸದಿರುವುದನ್ನು



ಪ್ರಶ್ನಿಸಿದ ಅವರು, ಜನಪ್ರತಿನಿಧಿಗಳು ತಮ್ಮ ಹಕ್ಕುಗಳಿಗಾಗಿ ಧ್ವನಿ ಎತ್ತಬೇಕು, ಇಲ್ಲವಾದರೆ ಅಧಿಕಾರದಲ್ಲಿ ಪಾಲು ಪಡೆಯಲು ಸಾಧ್ಯವಿಲ್ಲ ಎಂದು ಎಚ್ಚರಿಸಿದರು.

ಗ್ರಾಮ ಮಟ್ಟದ ಸಣ್ಣ ವಿಷಯಗಳಲ್ಲಿಯೇ ಎಚ್ಚರಿಕೆ ವಹಿಸುವ ಜನರು, ಪಂಚಾಯತ್ ಚುನಾವಣೆಯಂತಹ ಪ್ರಮುಖ ವಿಷಯದಲ್ಲಿ ಮೌನವಾಗಿರುವುದು ಸರಿಯಲ್ಲ. ಸರ್ಕಾರ ಚುನಾವಣೆ ನಡೆಸದೆ ಅಧಿಕಾರ ಕಡಿತ ಮಾಡಿದರೂ ಮೌನವಾಗಿರುವುದನ್ನು ಪ್ರಶ್ನಿಸುವ ಸಮಯ ಬಂದಿದೆ ಎಂದು ಅವರು ಹೇಳಿದರು.

ಪಂಚಾಯತ್ ರಾಜ್ ವ್ಯವಸ್ಥೆ ರಾಜಕೀಯ ನಾಯಕತ್ವ ಬೆಳೆಸುವ ಪಾಠಶಾಲೆಯಾಗಿದೆ. ಜನರಿಗೆ ನೀಡಿರುವ ಅಧಿಕಾರವನ್ನು ಸಮರ್ಪಕವಾಗಿ ಬಳಸಿಕೊಂಡು ವಿಕೇಂದ್ರೀಕರಣವನ್ನು ಬಲಪಡಿಸಿದರೆ ಗದಗ ಜಿಲ್ಲೆ ಇತರ ಜಿಲ್ಲೆಗಳಿಗೆ ಮಾದರಿಯಾಗಬಹುದು ಎಂದು ಹೇಳಿದರು.

ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸಿ.ಎನ್. ಶ್ರೀಧರ್ ಪ್ರಾಸ್ತಾವಿಕವಾಗಿ ಮಾತನಾಡಿ, ಹಿಂದಿನ ಕಾಲದಲ್ಲಿ ಗ್ರಾಮ ಮಟ್ಟದಲ್ಲೇ ಸಮಸ್ಯೆಗಳಿಗೆ ಪಂಚಾಯತ್ ಮೂಲಕ ಪರಿಹಾರ ಕಂಡುಕೊಳ್ಳಲಾಗುತ್ತಿತ್ತು ಎಂದು ಹೇಳಿದರು. ಇಂದಿನ ದಿನಗಳಲ್ಲಿ

> "ಗಾಂಧೀಜಿಯವರ ಗ್ರಾಮ ಸ್ವರಾಜ್ಯದ ಕನಸು ನನಸಾಗಲು ಗದಗ ಜಿಲ್ಲೆಯಲ್ಲಿ ಉತ್ತಮ ವಾತಾವರಣವಿದೆ. ಗ್ರಾಮಸಭೆಯೇ ಅಭಿವೃದ್ಧಿಯ ಕೇಂದ್ರವಾಗಿದ್ದು, ಊರಿನ ಕಾಮಗಾರಿಗಳ ಅಂತಿಮ ನಿರ್ಧಾರಗಳು ಗ್ರಾಮಸಭೆಯಲ್ಲೇ ಕೈಗೊಳ್ಳಬೇಕು"
> **– ಡಿ.ಆರ್. ಪಾಟೀಲ, ಮಾಜಿ ಶಾಸಕ.**

ಉಪನ್ಯಾಸಕ ಪ್ರಕಾಶ ಮಾಚೇನಹಳ್ಳಿ ಮಾತನಾಡಿ, ಪಂಚಾಯತ್ ರಾಜ್ ವ್ಯವಸ್ಥೆಯ ಮೂಲ ತತ್ವವೇ ಜನಸಾಮಾನ್ಯರ ಭಾಗವಹಿಸುವಿಕೆಯಾಗಿದ್ದು, ಇದು ವೇದಗಳ ಕಾಲದಿಂದಲೇ ಪ್ರಚಲಿತದಲ್ಲಿದೆ ಎಂದರು. ಗಂಗ, ಮೌರ್ಯ ಮತ್ತು ಚೋಳರ ಆಡಳಿತದಲ್ಲಿಯೂ ಸ್ಥಳೀಯ ಆಡಳಿತ ವ್ಯವಸ್ಥೆ ಅಸ್ತಿತ್ವದಲ್ಲಿತ್ತು ಎಂದು ಇತಿಹಾಸದ ಉದಾಹರಣೆಗಳನ್ನು ನೀಡಿದರು.

ಪಂಚಾಯತ್ ರಾಜ್ ವ್ಯವಸ್ಥೆ ಇನ್ನಷ್ಟು ಬಲಿಷ್ಠವಾಗಿದೆ ಎಂದು ಅಭಿಪ್ರಾಯಪಟ್ಟರು.

ಗ್ರಾಮ ಪಂಚಾಯತ್ ಸದಸ್ಯರು ತಮ್ಮ ವಾರ್ಡ್ ಅನ್ನು ಮಾದರಿ ವಾರ್ಡಾಗಿ ರೂಪಿಸಲು ಸಂಕಲ್ಪಬದ್ಧರಾಗಬೇಕು. 1973ರ ಪಂಚಾಯತ್ ರಾಜ್ ತಿದ್ದುಪಡಿಯಿಂದ ಪಂಚಾಯತ್‌ಗಳಿಗೆ ಹೆಚ್ಚಿನ ಅಧಿಕಾರ ಸಿಕ್ಕಿದ್ದು, ಅದನ್ನು ಸಮರ್ಪಕವಾಗಿ ಬಳಸಿ ಗ್ರಾಮಾಭಿವೃದ್ಧಿ ಸಾಧಿಸಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಜಿಲ್ಲಾ ಅಧ್ಯಕ್ಷ ಬಿಬಿ ಅಸೂಟಿ, ಜಿಪಂ ಮಾಜಿ ಅಧ್ಯಕ್ಷರಾದ ವಾಸಣ್ಣ ಕುರಡಗಿ, ಸಿದ್ದು ಪಾಟೀಲ, ಪ್ರೊ. ಜೆ.ಕೆ. ಜಮಾದಾರ, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್., ಸಿ.ಆರ್. ಮುಂಡರಗಿ, ಎಂ.ವೈ. ಪಾಟೀಲ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಗ್ರಾಮ ಪಂಚಾಯತ್ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು ಹಾಗೂ ಪಿಡಿಓಗಳು ಉಪಸ್ಥಿತರಿದ್ದರು.

---

# ಪ್ರಧಾನಿ ಮೋದಿ ಕುರಿತು ಖರ್ಗೆ ಆಕ್ಷೇಪಾರ್ಹ ಪದ ಬಳಕೆಗೆ ಖಂಡನೆ

> "ಇದು ಕೇವಲ ವ್ಯಕ್ತಿಗೆ ಮಾಡಿದ ಅವಮಾನವಲ್ಲ, ಪ್ರಧಾನಿ ಹುದ್ದೆಯ ಗೌರವಕ್ಕೆ ಧಕ್ಕೆ ತರುವ ನಡೆ" ಎಂದು ವಿಜಯಕುಮಾರ್ ಗಡ್ಡಿ ಆಕ್ರೋಶ ವ್ಯಕ್ತಪಡಿಸಿದರು.

**■ವಿಜಯಸಾಕ್ಷಿ ಸುದ್ದಿ, ಗದಗ**

ಕಾಂಗ್ರೆಸ್ ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಪ್ರಧಾನಿ ನರೇಂದ್ರ ಮೋದಿ ಕುರಿತು ನೀಡಿರುವ "ಭಯೋತ್ಪಾದಕ" ಎಂಬ ಹೇಳಿಕೆಗೆ ಬಿಜೆಪಿ ಮುಖಂಡ ವಿಜಯಕುಮಾರ್ ಗಡ್ಡಿ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಹೇಳಿಕೆ ನೀಡಿರುವ ಅವರು, ದೇಶದ ಜನಪ್ರಿಯ ಪ್ರಧಾನಿ ನರೇಂದ್ರ ಮೋದಿ ಅವರ ಬಗ್ಗೆ ಇಂತಹ ಆಕ್ಷೇಪಾರ್ಹ ಪದ ಬಳಕೆ ಮಾಡಿರುವುದು ಅತ್ಯಂತ ಕೀಳುಮಟ್ಟದ ರಾಜಕೀಯದ ಪರಾಕಾಷ್ಠೆಯಾಗಿದ್ದು, ಇದು ಕೇವಲ ಒಬ್ಬ ವ್ಯಕ್ತಿಗೆ ಮಾಡಿದ ಅವಮಾನವಲ್ಲ, ಭಾರತದ ಪ್ರಜಾಪ್ರಭುತ್ವ ಹಾಗೂ ಪ್ರಧಾನಿ ಹುದ್ದೆಯ ಗೌರವಕ್ಕೆ ಧಕ್ಕೆ ತರುವಂತಹ ನಡೆ ಎಂದು ಹೇಳಿದ್ದಾರೆ.

ರಾಜಕೀಯವಾಗಿ ಹಾಗೂ ಸೈದ್ಧಾಂತಿಕವಾಗಿ ಎದುರಿಸಲು ಸಾಧ್ಯವಾಗದ ಕಾಂಗ್ರೆಸ್ ಪಕ್ಷ ಇಂತಹ ಹೇಳಿಕೆಗಳ ಮೂಲಕ ತನ್ನ ಹತಾಶೆಯನ್ನು ತೋರಿಸುತ್ತಿದೆ ಎಂದು ಟೀಕಿಸಿರುವ ಅವರು, ಮಲ್ಲಿಕಾರ್ಜುನ ಖರ್ಗೆ ಅವರು ತಮ್ಮ ಹೇಳಿಕೆಯನ್ನು ತಕ್ಷಣ ಹಿಂಪಡೆದು, ಪ್ರಧಾನಿ ಹಾಗೂ ದೇಶದ ಜನತೆಯಲ್ಲಿ ಬೇಷರತ್ ಕ್ಷಮೆಯಾಚಿಸಬೇಕು ಎಂದು ಆಗ್ರಹಿಸಿದ್ದಾರೆ.

ಭಯೋತ್ಪಾದನೆಯ ವಿರುದ್ಧ ಶೂನ್ಯ ಸಹನೆ ನೀತಿಯನ್ನು ಅನುಸರಿಸುವ ನಾಯಕರನ್ನು ಇಂತಹ ಶಬ್ದಗಳಿಂದ ನಿಂದಿಸುವುದು ಅಕ್ಷಮ್ಯ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

ಪ್ರಧಾನಿ ಮೋದಿ ಅವರು "ಪ್ರಧಾನ ಸೇವಕ"ರಾಗಿದ್ದು, ಅವರ ವಿರುದ್ಧ ಅಸಂವಿಧಾನಿಕ ಪದಗಳನ್ನು ಬಳಸುವುದನ್ನು ಭಾರತೀಯ ಜನತಾ ಪಕ್ಷ ತೀವ್ರವಾಗಿ ಖಂಡಿಸುತ್ತದೆ. ಕಾಂಗ್ರೆಸ್ ಪಕ್ಷ ತನ್ನ ರಾಜಕೀಯ ಸಂಸ್ಕೃತಿಯನ್ನು ಸರಿಪಡಿಸಿಕೊಳ್ಳಬೇಕು ಎಂದು ವಿಜಯಕುಮಾರ್ ಗಡ್ಡಿ ಹೇಳಿದ್ದಾರೆ.

---

# ಬಸವಣ್ಣ ಧೀಮಂತ ವ್ಯಕ್ತಿ, ಮಹಾನ್ ಮಾನವತಾವಾದಿ



**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

12ನೇ ಶತಮಾನದಲ್ಲಿಯೇ ಅನುಭವ ಮಂಟಪದ ಮೂಲಕ ಸರ್ವ ಧರ್ಮೀಯರನ್ನು ಒಗ್ಗೂಡಿಸಿ ಧರ್ಮ ಸಂವಿಧಾನ ರೂಪಿಸಿದ ಬಸವಣ್ಣ ಧೀಮಂತ ವ್ಯಕ್ತಿ ಹಾಗೂ ಮಹಾನ್ ಮಾನವತಾವಾದಿಯಾಗಿದ್ದರು ಎಂದು ಎಸ್‌ಎವ್ಹಿ ಬಾಲಕಿಯರ ಪ್ರೌಢಶಾಲೆಯ ಮುಖ್ಯೋಪಾಧ್ಯಾಯ ಎಸ್.ಎನ್. ಹೂಲಗೇರಿ ಹೇಳಿದರು.

ನರೇಗಲ್ಲ-ಕೋಡಿಕೊಪ್ಪದ ಬಣಜಿಗ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಶ್ರೀ ಬಸವೇಶ್ವರ ಇಂಜಿನಿಯರಿಂಗ್ ವರ್ಕ್ಸ್‌ನಲ್ಲಿ ಆಯೋಜಿಸಿದ್ದ ಬಸವ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಲಿಂಗಾಯತ ಧರ್ಮವು ತನ್ನದೇ ಆದ ಶ್ರೀಮಂತ ಪರಂಪರೆಯನ್ನು ಹೊಂದಿದ್ದು, ಮಾನವ ಧರ್ಮದ ಉದ್ಧಾರವನ್ನು ಬಯಸುತ್ತದೆ.

ಬಸವಣ್ಣ ಇಷ್ಟಲಿಂಗೋಪಾಸನೆಯ ಮೂಲಕ ಸರ್ವಧರ್ಮೀಯರ ಹಿತವನ್ನು ಬಯಸಿ ವಿಶ್ವ ಯೋಗಿಯಾಗಿ ಹೊರಹೊಮ್ಮಿದರು. ಅವರ ಮಾನವತಾವಾದಿ ಚಿಂತನೆಗಳನ್ನು ವಿಶ್ವವೇ ಕೊಂಡಾಡುತ್ತಿದೆ ಎಂದರು.

ಜಾತಿ-ಮತ ಭೇದಗಳನ್ನು ಹೋಗಲಾಡಿಸಲು ಅನುಭವ ಮಂಟಪವನ್ನು ಸ್ಥಾಪಿಸಿ ಎಲ್ಲ ವರ್ಗದವರಿಗೆ ಸಮಾನ ಅವಕಾಶ ಕಲ್ಪಿಸಿದ ಬಸವಣ್ಣ ಸಮಾಜದಲ್ಲಿ ಮಹತ್ತರ ಸಾಮಾಜಿಕ ಕ್ರಾಂತಿಯನ್ನುಂಟುಮಾಡಿದರು. ಶರಣರ ವಚನಗಳು ಇಂದು ಮನೆಮನೆಗಳಲ್ಲಿ ಪಠಣವಾಗುವಂತಾದರೆ ಸಮಾಜದ ಸುಧಾರಣೆ ಸಾಧ್ಯ ಎಂದು ಹೇಳಿದರು.

ನರೇಗಲ್ಲ ಈಶ್ವರೀಯ ವಿಶ್ವವಿದ್ಯಾಲಯದ ಸಂಚಾಲಕಿ ಬಿ.ಕೆ. ಸವಿತಕ್ಕ ಮಾತನಾಡಿ, "ಕಾಯಕವೇ ಕೈಲಾಸ" ಎಂಬ ಬಸವಣ್ಣನವರ ತತ್ವವನ್ನು ಜೀವನದಲ್ಲಿ ಅಳವಡಿಸಿಕೊಂಡರೆ ಬದುಕಿಗೆ ಅರ್ಥ ಸಿಗುತ್ತದೆ ಎಂದರು.

ಈ ಸಂದರ್ಭದಲ್ಲಿ ನಿವೃತ್ತ ಪ್ರಾಚಾರ್ಯ ಸಿ.ವಿ. ವಂಕಲಕುಂಟಿ, ಗೌರವಾಧ್ಯಕ್ಷ ಗುರುಪಾದಪ್ಪ ಬೆಲ್ಲದ ಉಪಸ್ಥಿತರಿದ್ದರು. 6ರಿಂದ 12 ವರ್ಷದ ಮಕ್ಕಳಿಗೆ ವಚನ ಸ್ಪರ್ಧೆ ಏರ್ಪಡಿಸಿ ವಿಜೇತರಿಗೆ ಬಹುಮಾನ ವಿತರಿಸಲಾಯಿತು.

---

# ಎಸ್‌ಎಫ್‌ಸಿ ಆಂಗ್ಲ ಮಾಧ್ಯಮ ಶಾಲೆಗೆ ಶೇ.100 ಫಲಿತಾಂಶ


**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ನಗರದ ಎಸ್‌ಎಫ್‌ಸಿ ಆಂಗ್ಲ ಮಾಧ್ಯಮ ಶಾಲೆಯ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳು ಈ ಬಾರಿ ಶೇ.100 ಫಲಿತಾಂಶ ಸಾಧಿಸಿ ಗಮನಸೆಳೆದಿದ್ದಾರೆ. ಒಟ್ಟು 49 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು, ಎಲ್ಲರೂ ಉತ್ತೀರ್ಣರಾಗಿದ್ದಾರೆ. ಇವರಲ್ಲಿ 17 ವಿದ್ಯಾರ್ಥಿಗಳು ಅತ್ಯುನ್ನತ ಶ್ರೇಣಿಯಲ್ಲಿ, 26 ವಿದ್ಯಾರ್ಥಿಗಳು ಪ್ರಥಮ ಶ್ರೇಣಿಯಲ್ಲಿ ಹಾಗೂ 6 ವಿದ್ಯಾರ್ಥಿಗಳು ದ್ವಿತೀಯ ಶ್ರೇಣಿಯಲ್ಲಿ ತೇರ್ಗಡೆಯಾಗಿದ್ದಾರೆ.

ಶಾಲೆಯಲ್ಲಿ ಸಂತೃಪ್ತಿ ಮಾಬಳಿ 612 ಅಂಕಗಳೊಂದಿಗೆ ಪ್ರಥಮ ಸ್ಥಾನ ಪಡೆದಿದ್ದಾರೆ. ಶ್ರೀನಾಥ ಮಾಢಳ್ಳಿ 603 ಅಂಕಗಳೊಂದಿಗೆ ದ್ವಿತೀಯ ಸ್ಥಾನ ಹಾಗೂ ಪೂಜಾ ಬಿ. ಸ್ವಾಮಿ 601 ಅಂಕಗಳೊಂದಿಗೆ ತೃತೀಯ ಸ್ಥಾನ ಗಳಿಸಿದ್ದಾರೆ. ಈ ಸಾಧನೆಗೆ ಶಾಲೆಯ ಆಡಳಿತ ಮಂಡಳಿ ಹಾಗೂ ಶಿಕ್ಷಕ ವೃಂದ ವಿದ್ಯಾರ್ಥಿಗಳನ್ನು ಅಭಿನಂದಿಸಿದ್ದಾರೆ.



# ಮೌಲಾನಾ ಆಝಾದ್ ಶಾಲೆಗೆ ಶೇ.92.59 ಫಲಿತಾಂಶ



**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಪಟ್ಟಣದ ಮೌಲಾನಾ ಆಝಾದ್ ಶಾಲೆಯಲ್ಲಿ ನಡೆದ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ವಿದ್ಯಾರ್ಥಿಗಳು ಉತ್ತಮ ಸಾಧನೆ ಮಾಡಿದ್ದು, ಶಾಲೆಯು ಒಟ್ಟಾರೆ 92.59 ಶೇಕಡಾ ಫಲಿತಾಂಶ ದಾಖಲಿಸಿದೆ. ಶಾಲೆಯಲ್ಲಿ ಅರುಣ ಹೆಳವರ 540 ಅಂಕಗಳೊಂದಿಗೆ ಪ್ರಥಮ ಸ್ಥಾನ ಪಡೆದಿದ್ದಾರೆ. ಸೈಯದಾಫರಾ ಅರಶದ ಅಲಿ ಖಾಜಿ 529 ಅಂಕಗಳೊಂದಿಗೆ ದ್ವಿತೀಯ ಹಾಗೂ ಶಿವರಾಜ ಈಳಗೇರ 510 ಅಂಕಗಳೊಂದಿಗೆ ತೃತೀಯ ಸ್ಥಾನ ಗಳಿಸಿದ್ದಾರೆ.

ಈ ಬಾರಿ 6 ವಿದ್ಯಾರ್ಥಿಗಳು ಡಿಸ್ಟಿಂಕ್ಷನ್, 11 ಮಂದಿ ಪ್ರಥಮ ದರ್ಜೆ ಹಾಗೂ 8 ಮಂದಿ ದ್ವಿತೀಯ ದರ್ಜೆಯಲ್ಲಿ ಉತ್ತೀರ್ಣರಾಗಿದ್ದಾರೆ. ವಿದ್ಯಾರ್ಥಿಗಳ ಈ ಸಾಧನೆಗೆ ಶಾಲೆಯ ಆಡಳಿತ ಮಂಡಳಿ ಮತ್ತು ಶಿಕ್ಷಕ ವೃಂದ ಅಭಿನಂದನೆ ಸಲ್ಲಿಸಿದ್ದಾರೆ.

---

# ಶಂಕರಾಚಾರ್ಯರು ಇರದಿದ್ದರೆ 'ಹಿಂದೂ' ಪದವೇ ಉಳಿಯುತ್ತಿರಲಿಲ್ಲ



**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಒಂದು ವೇಳೆ ಜಗದ್ಗುರು ಆದಿ ಶಂಕರಾಚಾರ್ಯ ಈ ಭೂಮಿಯಲ್ಲಿ ಅವತರಿಸದಿದ್ದರೆ 'ಹಿಂದೂ' ಎಂಬ ಪದವೇ ಜಗತ್ತಿನಲ್ಲಿ ಉಳಿದಿರುತ್ತಿರಲಿಲ್ಲ; ನಾವು ಬೇರೆ ಯಾವುದೋ ಧರ್ಮದ ಅನುಯಾಯಿಗಳಾಗಿರುತ್ತಿದ್ದೆವು ಎಂದು ಅರ್ಚನಾ ಕುಲಕರ್ಣಿ ಹೇಳಿದರು.

ಪಟ್ಟಣದ ಶ್ರೀ ದತ್ತಾತ್ರೇಯ ದೇವಸ್ಥಾನದಲ್ಲಿ ನಡೆದ ಶಂಕರಾಚಾರ್ಯರ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಸನಾತನ ಧರ್ಮದ ಪುನರುಜ್ಜೀವನಕ್ಕೆ ಶಂಕರಾಚಾರ್ಯರ ಕೊಡುಗೆ ಅಪಾರವಾಗಿದೆ. ಕ್ಷೀಣಿಸುತ್ತಿದ್ದ ಹಿಂದೂ ಸಂಸ್ಕೃತಿಯನ್ನು ಪುನಃ ಸ್ಥಾಪಿಸಿ ಸಮಾಜಕ್ಕೆ ದಾರಿದೀಪವಾಗಿದ್ದಾರೆ ಎಂದರು.

ಕೇವಲ 32 ವರ್ಷಗಳ ಸಣ್ಣ ಅವಧಿಯ ಜೀವನದಲ್ಲಿಯೇ ಲೋಕಮಾನ್ಯವಾದ ಮಹತ್ವದ ಕಾರ್ಯಗಳನ್ನು ನೆರವೇರಿಸಿದ ಅವರು ಆದಿ ಗುರು ಹಾಗೂ ಜಗದ್ಗುರು ಎಂಬ ಗೌರವಕ್ಕೆ ಪಾತ್ರರಾಗಿದ್ದಾರೆ.

ಅವರ ಅದ್ವೈತ ಸಿದ್ಧಾಂತ ಇಂದಿಗೂ ಪ್ರಸ್ತುತವಾಗಿದ್ದು, ಜನಜೀವನಕ್ಕೆ ಮಾರ್ಗದರ್ಶನ ನೀಡುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಮಂಜುನಾಥ ಹೆಗಡೆ ಮಾತನಾಡಿ, ಭಾರತೀಯ ತತ್ವಶಾಸ್ತ್ರವನ್ನು ಬೆಳಗಿಸಿದ ಆಚಾರ್ಯತ್ರಯರಲ್ಲಿ ಆದಿ ಶಂಕರರು ಪ್ರಮುಖರು ಎಂದು ಹೇಳಿದರು. ಅವರ ನಂತರ ಬಂದ ಮಧ್ವಾಚಾರ್ಯ ಮತ್ತು ರಾಮಾಚಾರ್ಯ ಕೂಡ ಹಿಂದೂ ಧರ್ಮದ ಸ್ಥಿರತೆಗೆ ಮಹತ್ವದ ಕೊಡುಗೆ ನೀಡಿದ್ದಾರೆ ಎಂದು ತಿಳಿಸಿದರು.

ಗುರುರಾಜ ಕುಲಕರ್ಣಿ ಮಾತನಾಡಿ, ಅದ್ವೈತ, ವಿಶಿಷ್ಟಾದ್ವೈತ ಮತ್ತು ದ್ವೈತ ಸಿದ್ಧಾಂತಗಳು ಭಾರತೀಯ ಆಧ್ಯಾತ್ಮಿಕ ಪರಂಪರೆಯನ್ನು ಸಮೃದ್ಧಗೊಳಿಸಿವೆ ಎಂದರು.

ಕಾರ್ಯಕ್ರಮದಲ್ಲಿ ನಿವೃತ್ತ ಮುಖ್ಯಶಿಕ್ಷಕ ಅರುಣ ಕುಲಕರ್ಣಿ ಮಾತನಾಡಿದರು. ಶ್ರೀ ದತ್ತಭಕ್ತ ಮಂಡಳಿಯ ಅಧ್ಯಕ್ಷ ಡಾ. ನಾಗರಾಜ ಗ್ರಾಮಪುರೋಹಿತ ಅಧ್ಯಕ್ಷತೆ ವಹಿಸಿದ್ದರು. ಕಾರ್ಯಕ್ರಮದಲ್ಲಿ ಹಲವಾರು ಗಣ್ಯರು ಹಾಗೂ ಭಕ್ತರು ಉಪಸ್ಥಿತರಿದ್ದರು.

"ಸನಾತನ ಧರ್ಮದ ಪುನರುಜ್ಜೀವನಕ್ಕೆ ಶಂಕರಾಚಾರ್ಯರ ಕೊಡುಗೆ ಅಪಾರ" ಎಂದು ಅರ್ಚನಾ ಕುಲಕರ್ಣಿ ಅಭಿಪ್ರಾಯಪಟ್ಟರು.

---

# ಫಲಿತಾಂಶಕ್ಕೂ ಮುನ್ನ ಅಲ್ಪಸಂಖ್ಯಾತರ ಮೇಲೆ ಆರೋಪ ಸರಿಯೇ?

## ಉಪಚುನಾವಣೆ ಬಳಿಕ ಪೂರ್ವಾಗ್ರಹಪೀಡಿತ ಹೇಳಿಕೆಗಳ ವಿರುದ್ಧ ಮಹ್ಮದಶಫಿ ನಾಗರಕಟ್ಟೆ ಆಕ್ರೋಶ

**■ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯದ ಎರಡು ಪ್ರಮುಖ ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆ ಮತದಾನ ಮುಕ್ತಾಯವಾದ ಬೆನ್ನಲ್ಲೇ ಫಲಿತಾಂಶ ಹೊರಬೀಳುವ ಮೊದಲು ಅಲ್ಪಸಂಖ್ಯಾತ ಸಮುದಾಯದ ಮೇಲೆ ಸೋಲಿನ ಹೊಣೆ ಹಾಕುವ ಪ್ರಯತ್ನ ನಡೆಯುತ್ತಿರುವುದಕ್ಕೆ ಅಖಿಲ ಕರ್ನಾಟಕ ಮುಸ್ಲಿಂ ಮಹಾಸಭಾ ರಾಜ್ಯಾಧ್ಯಕ್ಷ ಮಹ್ಮದಶಫಿ ನಾಗರಕಟ್ಟೆ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ನಗರದ ಮಹಾಸಭಾ ಕಚೇರಿಯಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷದ ಕೆಲ ನಾಯಕರು ಪೂರ್ವಾಗ್ರಹಪೀಡಿತ ಹೇಳಿಕೆಗಳನ್ನು ನೀಡುತ್ತಿದ್ದು, ಪಕ್ಷದ ಒಳಜಗಳ ಮುಚ್ಚಿಕೊಳ್ಳಲು ಅಲ್ಪಸಂಖ್ಯಾತರನ್ನು ಬಲಿಪಶು ಮಾಡಲಾಗುತ್ತಿದೆ ಎಂದು ಆರೋಪಿಸಿದರು. ದಾವಣಗೆರೆ



ಭಾಗದಲ್ಲಿ ಮುಸ್ಲಿಂ ಸಮುದಾಯವು ಸುಮಾರು 85 ಶೇಕಡಾ ಕಾಂಗ್ರೆಸ್ ಪರ ಮತದಾನ ಮಾಡಿರುವುದಾಗಿ ಅವರು ತಿಳಿಸಿದ್ದಾರೆ.

ಫಲಿತಾಂಶ ಇನ್ನೂ ಪ್ರಕಟವಾಗದಿರುವ ಸಂದರ್ಭದಲ್ಲಿ ಅಲ್ಪಸಂಖ್ಯಾತ ನಾಯಕರಿಂದಲೇ ಪಕ್ಷಕ್ಕೆ ಹಿನ್ನಡೆಯಾಗಿದೆ ಎಂದು ಆರೋಪಿಸುವುದು ನ್ಯಾಯಸಮ್ಮತವಲ್ಲ ಎಂದು ಅವರು ಅಭಿಪ್ರಾಯಪಟ್ಟರು. ಪಕ್ಷದ ಒಳಭಿನ್ನಮತ, ಟಿಕೆಟ್ ಹಂಚಿಕೆಯ ಗೊಂದಲಗಳಿಗೆ ಸಮುದಾಯವನ್ನು ಹೊಣೆ ಮಾಡುವುದು ಸರಿಯಲ್ಲ ಎಂದು ಹೇಳಿದರು.

ಚುನಾವಣೆ ಸಂದರ್ಭಗಳಲ್ಲಿ ಅಲ್ಪಸಂಖ್ಯಾತರ ಬೆಂಬಲ ಪಡೆಯುವ ಪಕ್ಷ ಅಧಿಕಾರ ಹಂಚಿಕೆ ಅಥವಾ ಟಿಕೆಟ್ ನೀಡುವಾಗ ಸಮುದಾಯವನ್ನು ಕಡೆಗಣಿಸುತ್ತಿದೆ ಎಂಬ ಅಸಮಾಧಾನವಿದೆ. ಜೊತೆಗೆ ಶಿಸ್ತು ಕ್ರಮಗಳಲ್ಲಿ ತಾರತಮ್ಯ ತೋರಲಾಗುತ್ತಿದ್ದು, ಕೇವಲ ಅಲ್ಪಸಂಖ್ಯಾತ ನಾಯಕರ ಮೇಲಷ್ಟೇ ಕ್ರಮ ಕೈಗೊಳ್ಳಲಾಗುತ್ತಿದೆ ಎಂಬ ಅನುಮಾನವೂ ವ್ಯಕ್ತವಾಗುತ್ತಿದೆ ಎಂದು ಹೇಳಿದರು.

> "ಅಲ್ಪಸಂಖ್ಯಾತರು ಕೇವಲ ಮತಬ್ಯಾಂಕ್ ಅಲ್ಲ; ಫಲಿತಾಂಶಕ್ಕೂ ಮುನ್ನ ಸಮುದಾಯವನ್ನು ಗುರಿಯಾಗಿಸುವುದು ಪ್ರಜಾಪ್ರಭುತ್ವಕ್ಕೆ ವಿರುದ್ಧ."
> **– ಮಹ್ಮದಶಫಿ ನಾಗರಕಟ್ಟೆ.**

ಅಲ್ಪಸಂಖ್ಯಾತರು ಕೇವಲ 'ಮತಬ್ಯಾಂಕ್' ಅಲ್ಲ ಎಂಬುದನ್ನು ಪಕ್ಷಗಳು ಅರಿತುಕೊಳ್ಳಬೇಕು. ಫಲಿತಾಂಶಕ್ಕೂ ಮುನ್ನ ಸಮುದಾಯವನ್ನು ಗುರಿಯಾಗಿಸುವುದು ಪ್ರಜಾಪ್ರಭುತ್ವದ ಮೌಲ್ಯಗಳಿಗೆ ವಿರುದ್ಧವಾಗಿದೆ. ಕಾಂಗ್ರೆಸ್ ಹೈಕಮಾಂಡ್ ತಕ್ಷಣ ಮಧ್ಯಪ್ರವೇಶಿಸಿ ಈ ರೀತಿಯ ಹೇಳಿಕೆಗಳನ್ನು ತಡೆಯಬೇಕು ಎಂದು ನಾಗರಕಟ್ಟೆ ಆಗ್ರಹಿಸಿದರು.

ಇದನ್ನು ತಡೆಯದಿದ್ದರೆ ಮುಂಬರುವ ಸಾರ್ವತ್ರಿಕ ಚುನಾವಣೆಗಳ ಮೇಲೆ ಗಂಭೀರ ಪರಿಣಾಮ ಬೀರುವ ಸಾಧ್ಯತೆ ಇದೆ ಎಂದು ಎಚ್ಚರಿಸಿದ ಅವರು, ಯಾರನ್ನು ಉಚ್ಚಾಟಿಸಬೇಕು ಅಥವಾ ಬಿಡಬೇಕು ಎಂಬುದು ಕಾಂಗ್ರೆಸ್ ಪಕ್ಷದ ಆಂತರಿಕ ವಿಷಯವಾಗಿದ್ದರೂ, ಅದನ್ನು ವರ್ಣರಂಜಿತವಾಗಿ ಚಿತ್ರಿಸಿ ಒಂದು ಸಮುದಾಯದ ಮೇಲೆ ಹೊಣೆ ಹಾಕಲು ಅವಕಾಶ ನೀಡುವುದಿಲ್ಲ ಎಂದು ಹೇಳಿದರು. ಜೊತೆಗೆ ಪಕ್ಷದ ಹಿರಿಯ ನಾಯಕರು ಪಾರಂಪರಿಕವಾಗಿ ಬೆಂಬಲಿಸುತ್ತಿರುವ ಸಮುದಾಯವನ್ನು ಮುಂದುವರೆಸಿಕೊಳ್ಳಬೇಕೆ ಎಂಬುದನ್ನು ಗಂಭೀರವಾಗಿ ಚಿಂತಿಸಬೇಕು ಎಂದು ಸೂಚಿಸಿದರು.

---

# ಶಿರಹಟ್ಟಿ ತಾಲೂಕು ವಸತಿ ನಿಲಯಗಳ ಎಸ್‌ಎಸ್‌ಎಲ್‌ಸಿ ಫಲಿತಾಂಶದಲ್ಲಿ ಅತ್ಯುತ್ತಮ ಸಾಧನೆ

## ಶೇ.96.15 ಫಲಿತಾಂಶ; 7ರಲ್ಲಿ 5 ನಿಲಯಗಳಲ್ಲಿ ಶೇ.100 ಸಾಧನೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಸಮಾಜ ಕಲ್ಯಾಣ ಇಲಾಖೆ ಹಾಗೂ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಶಿರಹಟ್ಟಿ ತಾಲೂಕಿನ ಮೆಟ್ರಿಕ್ ಪೂರ್ವ ವಸತಿ ನಿಲಯಗಳ ವಿದ್ಯಾರ್ಥಿಗಳು 2025-26ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶೇ.96.15 ರಷ್ಟು ಫಲಿತಾಂಶ ಪಡೆಯುವ ಮೂಲಕ ಅತ್ಯುತ್ತಮ ಸಾಧನೆ ಮಾಡಿದ್ದಾರೆ.

ಶಿರಹಟ್ಟಿ ತಾಲೂಕಿನ ಡಾ. ಬಿ.ಆರ್. ಅಂಬೇಡ್ಕರ್ ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕರ ವಸತಿ ನಿಲಯ (ಕಬಳಿಗೇರಿ ಗ್ರಾಮ), ಡಾ. ಬಿ.ಆರ್. ಅಂಬೇಡ್ಕರ್ ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕರ ವಸತಿ ನಿಲಯ (ಮಜ್ಜಿಗುಡ್ಡ ಗ್ರಾಮ), ಪರಿಶಿಷ್ಟ ಪಂಗಡದ ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕರ ವಸತಿ ನಿಲಯ (ಬನ್ನಿಕೊಪ್ಪ ಗ್ರಾಮ), ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕರ ವಸತಿ ನಿಲಯ (ಮಾಡಲಗೇರಿ ಗ್ರಾಮ), ಡಾ. ಬಿ.ಆರ್. ಅಂಬೇಡ್ಕರ್ ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕರ ವಸತಿ ನಿಲಯ (ಬೆಳ್ಳಟ್ಟಿ ಗ್ರಾಮ) ಸೇರಿದಂತೆ ಒಟ್ಟು 7 ವಸತಿ ನಿಲಯಗಳ ಪೈಕಿ 5 ವಸತಿ ನಿಲಯಗಳು ಶೇ.100 ಫಲಿತಾಂಶ ದಾಖಲಿಸಿವೆ.

> "ಬಡತನದ ನಡುವೆಯೂ ಶ್ರದ್ಧೆಯಿಂದ ಅಭ್ಯಾಸ ಮಾಡಿದರೆ ಇಂತಹ ಯಶಸ್ಸು ಸಾಧ್ಯ ಎಂಬುದನ್ನು ನಮ್ಮ ನಿಲಯದ ವಿದ್ಯಾರ್ಥಿಗಳು ಸಾಬೀತುಪಡಿಸಿದ್ದಾರೆ" ಎಂದು ಸಹಾಯಕ ನಿರ್ದೇಶಕರು ಹರ್ಷ ವ್ಯಕ್ತಪಡಿಸಿದ್ದಾರೆ.

**ವಿದ್ಯಾರ್ಥಿಗಳ ಸಾಧನೆ ವಿವರ ಹೀಗಿದೆ:** ಕಬಳಿಗೇರಿ ನಿಲಯದ ಕುಮಾರ ಎಸ್. ಲಮಾಣಿ ಅವರು 532 ಅಂಕಗಳನ್ನು (ಶೇ.85.12) ಪಡೆದು ಪ್ರಥಮ ಸ್ಥಾನ ಗಳಿಸಿದ್ದಾರೆ. ನಿಖಿಲ್ ರೇವಣಕಾರ್ ಅವರು 512 ಅಂಕಗಳನ್ನು (ಶೇ.81.92) ಪಡೆದು ಉತ್ತಮ ಸಾಧನೆ ಮಾಡಿದ್ದಾರೆ. ಬೆಳ್ಳಟ್ಟಿ ನಿಲಯದ ಕುಮಾರ ಕುರಿ ಅವರು 527 ಅಂಕಗಳನ್ನು (ಶೇ.84.32) ಗಳಿಸಿದ್ದು ಗಮನಾರ್ಹವಾಗಿದೆ. ಶಿರಹಟ್ಟಿ ನಿಲಯದ ಕುಮಾರಿ ಅರ್ಚನಾ ಎಫ್. ಕಾಲೀ ಅವರು 502 ಅಂಕಗಳನ್ನು (ಶೇ.80.32) ಪಡೆದು ವಿಶೇಷ ಸಾಧನೆ ಮಾಡಿದ್ದಾರೆ.

ವಿದ್ಯಾರ್ಥಿಗಳ ಈ ಯಶಸ್ಸಿಗೆ ಕಾರಣರಾದ ವಸತಿ ನಿಲಯಗಳ ಮೇಲ್ವಿಚಾರಕರು, ಅಡುಗೆ ಸಿಬ್ಬಂದಿ ಹಾಗೂ ವಿಶೇಷವಾಗಿ ಮಾರ್ಗದರ್ಶನ ನೀಡಿದ ಶಿಕ್ಷಕರಿಗೆ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ಅಭಿನಂದನೆ ಸಲ್ಲಿಸಿದ್ದಾರೆ.

## ಪಿಎಸ್ಐ ಬಸವರಾಜ್ ಅಡವಿಬಾವಿಗೆ ಬೀಳ್ಕೊಡುಗೆ



■ ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಹಗರಿಬೊಮ್ಮನಹಳ್ಳಿ ಪೊಲೀಸ್ ಠಾಣೆಯ ದಕ್ಷ ಅಧಿಕಾರಿ ಪಿಎಸ್ಐ ಬಸವರಾಜ್ ಅಡವಿಬಾವಿ ಅವರಿಗೆ ವರ್ಗಾವಣೆಯಾದ ಹಿನ್ನೆಲೆಯಲ್ಲಿ ಬೀಳ್ಕೊಡುಗೆ ಸಮಾರಂಭವನ್ನು ಆಯೋಜಿಸಿ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ವಿವಿಧ ಸಂಘಟನೆಗಳ ಮುಖಂಡರು, ಬಸವರಾಜ್ ಅಡವಿಬಾವಿ ಅವರು ಸರಳ ಜೀವನ ನಡೆಸುವ, ಸ್ನೇಹಪರ ಸ್ವಭಾವದ ಹಾಗೂ ಸಾರ್ವಜನಿಕರ ಅಚ್ಚುಮೆಚ್ಚಿನ ಅಧಿಕಾರಿಯಾಗಿದ್ದರು ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ತಾಲೂಕಿನ ವಿವಿಧ ಹಳ್ಳಿಗಳಲ್ಲಿ ಜಾಗೃತಿ ಮೂಡಿಸುವ ಕಾರ್ಯಗಳನ್ನು ನಡೆಸಿ ಜನರ ಮನಸ್ಸು ಗೆದ್ದ ಅಪರೂಪದ ವ್ಯಕ್ತಿ ಎಂದು ಅವರು ಹೇಳಿದರು.

"ಸಾರ್ವಜನಿಕರೊಂದಿಗೆ ಸ್ನೇಹಭಾವದಿಂದ ಕೆಲಸ ಮಾಡಿ ಜನಮನ ಗೆದ್ದ ಅಧಿಕಾರಿಯಾಗಿ ಅಡವಿಬಾವಿ ಅವರು ಗುರುತಿಸಿಕೊಂಡಿದ್ದಾರೆ" ಎಂದು ಮುಖಂಡರು ಹೇಳಿದರು.

ಈ ಸಂದರ್ಭದಲ್ಲಿ ವಾಲ್ಮೀಕಿ ಸಮಾಜದ ಅಧ್ಯಕ್ಷ ಪವಾಡಿ ಹನುಮಂತಪ್ಪ, ಡಿಶ್ ಮಂಜುನಾಥ್, ಅಂಬೇಡ್ಕರ್ ಸಂಘದ ಅಧ್ಯಕ್ಷ ದೊಡ್ಡಬಸಪ್ಪ ಗದ್ದಿಕೇರಿ, ವಾಲ್ಮೀಕಿ ಸಮಾಜದ ಮುಖಂಡ ಸೆರಗಾರ್ ಹುಚ್ಚಪ್ಪ, ಪುರಸಭೆ ಸದಸ್ಯ ಗಣೇಶ್ ಸೇರಿದಂತೆ ಕರ್ನಾಟಕ ದಲಿತ ಸಂಘರ್ಷ ಸಮಿತಿಯ ತಾಲೂಕು ಸಂಚಾಲಕ ಮಹೇಶ್ ಎ., ದಲಿತ ಮುಖಂಡರಾದ ಬೆಣಕಲ್ ಪ್ರಕಾಶ್, ಲೋಕಪ್ಪ, ನಿಂಗಪ್ಪ, ಬುಳ್ಳಪ್ಪ, ದಸಮಾಪುರ ಬಸವರಾಜ್, ಫಾರೆಸ್ಟ್ ಮುತ್ತೂರು ಪೂಜಾರಪ್ಪ ಹಾಗೂ ಇತರರು ಉಪಸ್ಥಿತರಿದ್ದರು.

### ಕುಡಿಯುವ ನೀರು, ಮೇವು ಕೊರತೆ ತಡೆಯಲು ಅಧಿಕಾರಿಗಳಿಗೆ ಡಿಸಿ ಸ್ನೇಹಲ್ ಆರ್. ಸೂಚನೆ

# ಬೇಸಿಗೆ ನಿರ್ವಹಣೆಗೆ ಕಟ್ಟುನಿಟ್ಟಿನ ಕ್ರಮ

"ಕುಡಿಯುವ ನೀರು ಮತ್ತು ಮೇವು ಕೊರತೆಯಾಗದಂತೆ ಕಟ್ಟುನಿಟ್ಟಾಗಿ ನಿಗಾವಹಿಸಿ ತಕ್ಷಣ ಕ್ರಮ ಕೈಗೊಳ್ಳಬೇಕು"

– ಸ್ನೇಹಲ್ ಆರ್. ಜಿಲ್ಲಾಧಿಕಾರಿ.

**ಮಳೆಯ ಅಂಕಿ-ಅಂಶ**

ಜನವರಿ 1ರಿಂದ ಎಪ್ರಿಲ್ 23ರವರೆಗೆ ವಾಡಿಕೆ 39.4 ಮಿಮೀ ಮಳೆಯ ಬದಲಾಗಿ 106 ಮಿಮೀ ಮಳೆಯಾಗಿ ಶೇ.169 ಹೆಚ್ಚಳ ದಾಖಲಾಗಿದೆ. ವಿವಿಧ ತಾಲೂಕುಗಳಲ್ಲಿಯೂ ಹೆಚ್ಚುವರಿ ಮಳೆಯಾಗಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.



■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಬೇಸಿಗೆ ಹಿನ್ನೆಲೆಯಲ್ಲಿ ಜನ-ಜಾನುವಾರುಗಳಿಗೆ ಕುಡಿಯುವ ನೀರು ಹಾಗೂ ಮೇವು ಕೊರತೆ ಉಂಟಾಗದಂತೆ ಅಧಿಕಾರಿಗಳು ನಿಗಾವಹಿಸಿ ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಸ್ನೇಹಲ್ ಆರ್. ಸೂಚಿಸಿದ್ದಾರೆ.

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆದ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯಲ್ಲಿ ಮಾತನಾಡಿದ ಅವರು, ಧಾರವಾಡ ಜಿಲ್ಲೆಯಲ್ಲಿ 15 ಗ್ರಾಮಗಳಿಗೆ 17 ಖಾಸಗಿ ಕೊಳವೆಬಾವಿಗಳ ಮೂಲಕ ನೀರು ಸರಬರಾಜು ಮಾಡಲಾಗುತ್ತಿದೆ ಎಂದು ತಿಳಿಸಿದರು.

ಮಾರ್ಚ್‌ನಲ್ಲಿ 30, ಎಪ್ರಿಲ್‌ನಲ್ಲಿ 34 ಹಾಗೂ ಮೇನಲ್ಲಿ 26 ಗ್ರಾಮಗಳು ನೀರಿನ ಸಮಸ್ಯೆ ಇರುವ ಗ್ರಾಮಗಳಾಗಿ ಗುರುತಿಸಲಾಗಿದ್ದು, ಒಟ್ಟು 90 ಗ್ರಾಮಗಳನ್ನು ಸಮಸ್ಯಾತ್ಮಕ ಗ್ರಾಮಗಳಾಗಿ ಗುರುತಿಸಲಾಗಿದೆ.

ಧಾರವಾಡ, ಹುಬ್ಬಳ್ಳಿ ಹಾಗೂ ಕಲಘಟಗಿ ತಾಲೂಕುಗಳ ಹೊಸಟ್ಟಿ, ಮಂಡಿಹಾಳ, ಬೇಲೂರ, ಮುಗದ, ಮನಗುಂಡಿ, ನೂಲ್ವಿ, ಅದರಗುಂಚಿ, ಕುರ್ಡಿಕೆರೆ, ಛಬ್ಬಿ, ನೆಲ್ಲಹರವಿ ತಾಂಡ, ಬಿ.ಹುಲಿಕಟ್ಟಿ, ದ್ಯಾಮನಕೊಂಡ, ಮುಕ್ಕಲ, ಹಿರೇಹುನಸಿಕಟ್ಟಿ, ಕುಡಲಗಿ ಸೇರಿದಂತೆ 15 ಗ್ರಾಮಗಳಿಗೆ ನೀರು ಪೂರೈಕೆ ಮಾಡಲಾಗುತ್ತಿದೆ.

ಮೇವಿನ ದಾಸ್ತಾನು: ಜಿಲ್ಲೆಯಲ್ಲಿ 2,35,059 ದನ-ಎಮ್ಮೆಗಳು ಹಾಗೂ 1,49,220 ಕುರಿ-ಮೇಕೆಗಳಿದ್ದು, 2,22,773.81 ಮೆಟ್ರಿಕ್ ಟನ್ ಮೇವು ಲಭ್ಯವಿದ್ದು ಮುಂದಿನ 32 ವಾರಗಳಿಗೆ ಸಾಕಾಗುವಷ್ಟು ಸಂಗ್ರಹವಿದೆ. ತಾಲೂಕುವಾರು ಮೇವಿನ ಲಭ್ಯತೆ ಹಾಗೂ ವಾರಗಳ ವಿವರಗಳನ್ನು ಜಿಲ್ಲಾಧಿಕಾರಿಗಳು ನೀಡಿದರು.

ಸಭೆಯಲ್ಲಿ ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ಆಯುಕ್ತ ಡಾ. ರುದ್ರೇಶ ಘಾಳಿ, ಎಡಿಸಿ ಗೀತಾ ಸಿ.ಡಿ., ಜಿಪಂ ಉಪ ಕಾರ್ಯದರ್ಶಿ ಮಲ್ಲಿಕಾರ್ಜುನ ತೊದಲಬಾಗಿ, ಮುಖ್ಯ ಯೋಜನಾಧಿಕಾರಿ ದೀಪಕ ಮಡಿವಾಳ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

### ಶ್ರೀ ವಿಶ್ವಪ್ರಿಯತೀರ್ಥ ಶ್ರೀಪಾದಂಗಳವರ ಆಶೀರ್ವಚನ

# ಸಮಾಜಕ್ಕೆ ಉತ್ತಮ ಸಿದ್ಧಾಂತ ನೀಡಿದವರೇ ಆಚಾರ್ಯರು




"ಇಂದಿನ ಸಮಾಜದಲ್ಲಿ ಪ್ರತಿದಿನ ಬೆಳಿಗ್ಗೆ ಉತ್ತಮ ವಿಚಾರಧಾರೆಗಳನ್ನು ಬೆಳೆಸಿಕೊಳ್ಳುವ ಅಗತ್ಯವಿದೆ. ಆದರೆ ಇತ್ತೀಚಿನ ದಿನಗಳಲ್ಲಿ ಪರಸ್ಪರ ಟೀಕೆ, ದ್ವೇಷ ಹೆಚ್ಚುತ್ತಿದೆ. ಆಧ್ಯಾತ್ಮ ಮತ್ತು ಶ್ರದ್ಧಾಭಕ್ತಿಯನ್ನು ಅಳವಡಿಸಿಕೊಂಡಾಗ ಮಾತ್ರ ಸಮಾಜ ಉತ್ತಮ ಮಾರ್ಗದಲ್ಲಿ ಸಾಗುತ್ತದೆ."

–ಶ್ರೀ ವಿಶ್ವಪ್ರಿಯತೀರ್ಥ ಶ್ರೀಪಾದಂಗಳವರು

■ ವಿಜಯಸಾಕ್ಷಿ ಸುದ್ದಿ, ಗದಗ

ಹರಿ ಸರ್ವರಿಗೂ ಉತ್ತಮನಾದ ಕಾರಣ "ಹರಿ ಸರ್ವೋತ್ತಮ" ಎಂಬ ವಾಕ್ಯ ಪ್ರಚಲಿತದಲ್ಲಿದ್ದು, ಸಮಾಜಕ್ಕೆ ಉತ್ತಮ ಸಿದ್ಧಾಂತ ನೀಡಿದವರೇ ಆಚಾರ್ಯರು ಎಂದು ಜಗದ್ಗುರು ಶ್ರೀ ಮದ್ವಾಚಾರ್ಯರಿಂದ ಪ್ರತಿಷ್ಠಾಪಿಸಲಾದ ಉಡುಪಿ ಶ್ರೀಕೃಷ್ಣನ ಪೂಜಾ ಪರ್ಯಾಯಸ್ಥರಾದ ಶ್ರೀ ವಿದ್ಯಾಮಾನತೀರ್ಥ ಶ್ರೀಪಾದಂಗಳವರ ಪರಮ ಶಿಷ್ಯರಾದ ಅದಮಾರು ಮಠದ ಹಿರಿಯ ಶ್ರೀಗಳಾದ ಶ್ರೀ ವಿಶ್ವಪ್ರಿಯತೀರ್ಥ ಶ್ರೀಪಾದಂಗಳವರು ತಮ್ಮ ಆಶೀರ್ವಚನದಲ್ಲಿ ಹೇಳಿದರು.

ಅವರು ಶುಕ್ರವಾರ ಸಂಜೆ ಗದಗ ನಗರದ ಐತಿಹಾಸಿಕ ಶ್ರೀ ವೀರನಾರಾಯಣ ದೇವಸ್ಥಾನದಲ್ಲಿ ಶ್ರೀ ವೀರನಾರಾಯಣ, ಶ್ರೀ ತ್ರಿಕೂಟೇಶ್ವರ ದೇವಸ್ಥಾನ ಟ್ರಸ್ಟ್ ಕಮಿಟಿ, ಶ್ರೀ ಪವಮಾನ ಸೇವಾ ಸಮಿತಿ, ಶ್ರೀಗುರು ರಾಘವೇಂದ್ರ ಉತ್ಸವ ಮಂಡಳಿ, ಶ್ರೀ ಮಹಾಲಕ್ಷ್ಮೀ ಯುವತಿ ಮಂಡಳ, ಶ್ರೀ ಲಕ್ಷ್ಮೀನಾರಾಯಣ ಮಹಿಳಾ ಮಂಡಳ, ಶ್ರೀ ವೀರನಾರಾಯಣ ಯುವಕ ಮಂಡಳ ಹಾಗೂ ಶ್ರೀ ಲಕ್ಷ್ಮೀನಾರಾಯಣ ಭಜನಾ ಮಂಡಳ ಇವರ ಸಹಯೋಗದಲ್ಲಿ ಮೂರು ದಿನಗಳ ಕಾಲ ಆಯೋಜಿಸಲಾದ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು.

"ಹರಿ ಸರ್ವೋತ್ತಮ" ಎನ್ನುವುದು ಆಚಾರ್ಯರು ನೀಡಿದ ಮಹತ್ವದ ಸಿದ್ಧಾಂತವಾಗಿದೆ. ದೇವರಿಗೆ ನಾವು ಎರಡೂ ಕೈಗಳಿಂದ ಸಮರ್ಪಿಸಿದಾಗ, ಭಗವಂತನು ನಾಲ್ಕು ಕೈಗಳಲ್ಲಿ ನಮಗೆ ಮರಳಿ ನೀಡಲು ಸಿದ್ಧನಾಗುತ್ತಾನೆ. ಮೊದಲು ನಾವು ಭಕ್ತಿಯಿಂದ ಸಮರ್ಪಿತರಾಗಬೇಕು ಎಂದು ಅವರು ತಿಳಿಸಿದರು.

ಶ್ರೀಕೃಷ್ಣನಿಗೆ ವಿಷ ಉಣಿಸಲು ಬಂದ ಪೂತಣಿಯ ಪ್ರಸಂಗವನ್ನು ಉಲ್ಲೇಖಿಸಿದ ಅವರು, ಭಗವಂತನು ನಾವು ನೀಡಿದುದನ್ನು ಶುದ್ಧೀಕರಿಸಿ, ಕಲ್ಮಷವಿಲ್ಲದ ರೂಪದಲ್ಲಿ ಭಕ್ತರಿಗೆ ಮರಳಿ ನೀಡುತ್ತಾನೆ. ಇದೇ ದೈವಿಕ ಕರ್ತವ್ಯ ಎಂದು ವಿವರಿಸಿದರು.

ಈ ಸಂದರ್ಭದಲ್ಲಿ ಪಂ. ವರದಾಚಾರ್ಯ ಜಾಲಿಹಾಳ, ಶ್ರೀಧರಾಚಾರ್ಯ ಶಿರಹಟ್ಟಿ, ಶ್ರೀಕಾಂತಾಚಾರ್ಯ ನಿಲೂಗಲ್ಲ, ಪ್ರಲ್ಹಾದಾಚಾರ್ಯ ನಿಲೂಗಲ್ಲ, ವೆಂಕಟೇಶ ಕುಲಕರ್ಣಿ, ಜಯದೇವಭಟ್, ನಾರಾಯಣಾಚಾರ್ಯ ಗುಡಿ, ಪ್ರದ್ಯುಮ್ನ ಗುಡಿ ಸೇರಿದಂತೆ ಸದ್ಭಕ್ತರು ಉಪಸ್ಥಿತರಿದ್ದರು.

### ಬಡ್ಡಿಯೊಂದಿಗೆ ಹಣ ವಾಪಸ್, ರೂ.60 ಸಾವಿರ ಪರಿಹಾರ-ವೆಚ್ಚ ಪಾವತಿಸಲು ಆಯೋಗ ಆದೇಶ

# ಠೇವಣಿ ರೂ.11 ಲಕ್ಷ ಮರಳಿಸದ ಸೊಸೈಟಿಗೆ ದಂಡ

"ಠೇವಣಿ ಹಣ ಮರಳಿಸದಿರುವುದು ಗ್ರಾಹಕರ ರಕ್ಷಣಾ ಕಾಯ್ದೆಯಡಿ ಸೇವಾ ನ್ಯೂನ್ಯತೆ" ಎಂದು ಆಯೋಗ ಸ್ಪಷ್ಟಪಡಿಸಿದೆ.

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಕೆಲಗೇರಿ ರಸ್ತೆಯ ಶ್ರೀಮತಿ ಸುರೇಖಾ ಪಾಟೀಲ ಅವರು ಡಾ. ವಿ.ಎಸ್. ಸಾದುನವರ ಅವರ ಸೊಸೈಟಿಯಲ್ಲಿ ಇಟ್ಟುಕೊಂಡಿದ್ದ ಎಫ್.ಡಿ ಹಾಗೂ ಉಳಿತಾಯ ಖಾತೆಯ ಹಣವನ್ನು ಮರಳಿಸದ ಹಿನ್ನೆಲೆಯಲ್ಲಿ ಗ್ರಾಹಕರ ಆಯೋಗದಲ್ಲಿ ಸಲ್ಲಿಸಿದ ದೂರಿಗೆ ತೀರ್ಪು ಪ್ರಕಟವಾಗಿದೆ.

ದೂರುದಾರರು ತಮ್ಮ ವೈಯಕ್ತಿಕ ಅಗತ್ಯಕ್ಕಾಗಿ ಹಣ ವಾಪಸ್ ಕೇಳಿದರೂ ಸೊಸೈಟಿಯವರು ಹಣ ಮರಳಿಸದೇ ಸೇವಾ ನ್ಯೂನ್ಯತೆ ಎಸಗಿದ್ದಾರೆ ಎಂದು ಆರೋಪಿಸಿದ್ದರು. ಈ ಹಿನ್ನೆಲೆಯಲ್ಲಿ ಅವರು ಫೆಬ್ರವರಿ 5, 2026 ರಂದು ಜಿಲ್ಲಾ ಗ್ರಾಹಕರ ಆಯೋಗಕ್ಕೆ ದೂರು ಸಲ್ಲಿಸಿದ್ದರು.

ದೂರು ವಿಚಾರಣೆ ನಡೆಸಿದ ಆಯೋಗದ ಅಧ್ಯಕ್ಷ ಈಶಪ್ಪ ಭೂತೆ ಹಾಗೂ ಸದಸ್ಯೆ ವಿಶಾಲಾಕ್ಷಿ ಅ. ಬೋಳಶೆಟ್ಟಿ ಅವರು, ದೂರುದಾರರ ಎಫ್.ಡಿ ಹಾಗೂ ಉಳಿತಾಯ ಖಾತೆಯಲ್ಲಿ ಇರುವ ಹಣದ ದಾಖಲೆಗಳು ಸಾಬೀತಾಗಿರುವುದನ್ನು ಪರಿಗಣಿಸಿದರು. ಹಣ ಮರಳಿಸದಿರುವುದು ಗ್ರಾಹಕರ ರಕ್ಷಣಾ ಕಾಯ್ದೆಯಡಿ ಸೇವಾ ನ್ಯೂನ್ಯತೆ ಎಂದು ಆಯೋಗ ಅಭಿಪ್ರಾಯಪಟ್ಟಿದೆ.

ಅದರಂತೆ ರೂ.11 ಲಕ್ಷವನ್ನು ಬಡ್ಡಿಯೊಂದಿಗೆ ಲೆಕ್ಕ ಹಾಕಿ ಒಂದು ತಿಂಗಳೊಳಗೆ ದೂರುದಾರರಿಗೆ ಮರಳಿಸಲು ಆದೇಶಿಸಲಾಗಿದೆ. ಜೊತೆಗೆ ಮಾನಸಿಕ ಹಿಂಸೆ ಮತ್ತು ತೊಂದರೆಗಾಗಿ ರೂ.50,000 ಪರಿಹಾರ ಹಾಗೂ ರೂ.10,000 ಪ್ರಕರಣ ವೆಚ್ಚ ಪಾವತಿಸಲು ಸೊಸೈಟಿಯ ಅಧ್ಯಕ್ಷ ವಿರುಪಾಕ್ಷಿ ಎಸ್. ಸಾದುನವರ ಅವರಿಗೆ ಆಯೋಗ ಸೂಚಿಸಿದೆ.

### ತುಂಗಭದ್ರೆಯಲ್ಲಿ ನೀರಿನ ಕೊರತೆ; ಮಿತ ಬಳಕೆಗಾಗಿ ಪವಾಡಿ ಹನುಮಂತಪ್ಪ ಕರೆ

# ನೀರಿನ ಸಂಕಷ್ಟಕ್ಕೆ ಎಚ್ಚರಿಕೆ- ಹನಿ ಉಳಿಸಿ ಭವಿಷ್ಯ ಉಳಿಸಿ



**"ನೀರಿನ ಹನಿ ಉಳಿಸಿ – ಭವಿಷ್ಯ ಉಳಿಸಿ"**

ನೀರಿನ ಕೊರತೆ ದಿನೇದಿನೇ ಹೆಚ್ಚುತ್ತಿರುವ ಸಂದರ್ಭದಲ್ಲಿ ಪ್ರತಿಯೊಬ್ಬರೂ ನೀರನ್ನು ಸಂರಕ್ಷಿಸಿ, ಅಗತ್ಯಕ್ಕೆ ತಕ್ಕಂತೆ ಮಾತ್ರ ಬಳಸಬೇಕು ಎಂಬ ಕಾಳಜಿಯ ಸಂದೇಶವನ್ನು ಪವಾಡಿ ಹನುಮಂತಪ್ಪ ನೀಡಿದರು.

■ ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಕಡು ಬೇಸಿಗೆಯ ಪರಿಣಾಮವಾಗಿ ತುಂಗಭದ್ರಾ ನದಿಯಲ್ಲಿ ನೀರು ಬತ್ತಿಹೋಗಿರುವ ಹಿನ್ನೆಲೆಯಲ್ಲಿ ಜನ-ಜಾನುವಾರುಗಳಿಗೆ ತೀವ್ರ ನೀರಿನ ಸಮಸ್ಯೆ ಉಂಟಾಗಿದ್ದು, ಸಾರ್ವಜನಿಕರು ನೀರನ್ನು ಹಿತ-ಮಿತವಾಗಿ ಬಳಸಬೇಕು ಎಂದು ಪುರಸಭೆ ಸದಸ್ಯ ಪವಾಡಿ ಹನುಮಂತಪ್ಪ ಕರೆ ನೀಡಿದರು.

ಪುರಸಭೆಯಲ್ಲಿ ನಡೆದ ನೀರಿನ ಸಮಸ್ಯೆ ಕುರಿತು ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ಪಟ್ಟಣದ ಎಲ್ಲಾ 23 ವಾರ್ಡ್‌ಗಳ ಜನರು ಜಾಗೃತಿ ವಹಿಸಿ ನೀರನ್ನು ಸಂರಕ್ಷಿಸಬೇಕು ಎಂದು ತಿಳಿಸಿದರು. ಸಮಸ್ಯೆ ಶೀಘ್ರದಲ್ಲಿ ಬಗೆಹರಿಯದಿದ್ದರೆ ನೀರಿನ ವ್ಯವಸ್ಥೆಯನ್ನು ಘಖಖಃಗೆ ಹಸ್ತಾಂತರಿಸುವುದನ್ನೂ ಪರಿಗಣಿಸಬೇಕು ಎಂದು ಸೂಚಿಸಿದರು. ಪುರಸಭೆ ಸದಸ್ಯ ಸುರೇಶ್ ಬಣಕಾರ ಮಾತನಾಡಿ, ಇತರ ಎಲ್ಲ ಕಾರ್ಯಗಳನ್ನು ಬದಿಗೊತ್ತಿ ಮೊದಲು ಜನರ ಕುಡಿಯುವ ನೀರಿನ ಸಮಸ್ಯೆ ಪರಿಹರಿಸುವತ್ತ ಅಧಿಕಾರಿಗಳು ಗಮನ ಹರಿಸಬೇಕು ಎಂದು ಮುಖ್ಯಾಧಿಕಾರಿ ಕೆ.ಎಂ. ಮುಗಳಿ ಅವರಿಗೆ ತಿಳಿಸಿದರು.

ಪುರಸಭೆ ಸದಸ್ಯ ನವೀನ್ ಸಂಜ್ಯೋತ ಮಾತನಾಡಿ, ಸಮಸ್ಯೆಗಳ ಕುರಿತು ಸದಸ್ಯರಿಗೆ ಮಾಹಿತಿ ನೀಡಿದರೆ ಎಲ್ಲರೂ ಸೇರಿ ಪರಿಹಾರ ಕಂಡುಕೊಳ್ಳಲು ಸಿದ್ಧವಿದ್ದೇವೆ ಎಂದು ಹೇಳಿದರು.

ಪುರಸಭೆ ಸದಸ್ಯ ಗಣೇಶ್ ಮಾತನಾಡಿ, ಪ್ರಕೃತಿಯೊಂದಿಗೆ ಹೊಂದಿಕೊಂಡು ಬದುಕುವುದು ಅತ್ಯಗತ್ಯ. ಪ್ರಕೃತಿಯನ್ನು ನಿರ್ಲಕ್ಷಿಸಿದರೆ ಮನುಕುಲದ ಉಳಿವು ಕಷ್ಟವಾಗುತ್ತದೆ. ಆದ್ದರಿಂದ ನೀರನ್ನು ಜವಾಬ್ದಾರಿಯಿಂದ ಬಳಸಬೇಕು ಎಂದು ಸಲಹೆ ನೀಡಿದರು.

ಪುರಸಭೆ ಮುಖ್ಯಾಧಿಕಾರಿ ಕೆ.ಎಂ. ಮುಗಳಿ ಮಾತನಾಡಿ, ಕುಡಿಯುವ ನೀರಿನ ಯೋಜನೆಗೆ ಸಂಬಂಧಿಸಿದ ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡಿದ್ದು, ಇನ್ನೂ ಮೂರು-ನಾಲ್ಕು ದಿನಗಳಲ್ಲಿ ನೀರಿನ ಸರಬರಾಜು ಸುಧಾರಣೆಯಾಗಲಿದೆ. ಅಲ್ಲಿಯವರೆಗೆ ಜನತೆ ತಾಳ್ಮೆಯಿಂದ ಸಹಕರಿಸಬೇಕು ಎಂದು ಮನವಿ ಮಾಡಿದರು.

ಸಭೆಯಲ್ಲಿ ಕಾಂಗ್ರೆಸ್ ಮುಖಂಡ ಸೆರಗಾರ್ ಹುಚ್ಚಪ್ಪ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

### ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವಕ್ಕೆ ಸಜ್ಜು

# ಇಂದು 'ರೇಣುಕ ಸಿರಿ ಪ್ರಶಸ್ತಿ' ಪ್ರದಾನ, ಪ್ರತಿಭಾ ಪುರಸ್ಕಾರ ಸಮಾರಂಭ



"ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು" ಎಂದು ಸಂಸ್ಥೆಯ ಕಾರ್ಯದರ್ಶಿ ಪ್ರಭುದೇವ ಕಲ್ಮಠ ಮನವಿ ಮಾಡಿದ್ದಾರೆ.

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ನಗರದ ಶ್ರೀ ಜಗದ್ಗುರು ರೇಣುಕಾಚಾರ್ಯ ವಿದ್ಯಾ ಸಂಸ್ಥೆಯಲ್ಲಿ ಎಪ್ರಿಲ್ 25ರಂದು ಶನಿವಾರ ಬೆಳಿಗ್ಗೆ 11 ಗಂಟೆಗೆ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ, "ಶ್ರೀ ಜಗದ್ಗುರು ರೇಣುಕ ಸಿರಿ ಪ್ರಶಸ್ತಿ" ಪ್ರದಾನ ಹಾಗೂ ಪ್ರತಿಭಾ ಪುರಸ್ಕಾರ ಸಮಾರಂಭವನ್ನು ಆಯೋಜಿಸಲಾಗಿದೆ.

ಕಾರ್ಯಕ್ರಮವು ಬಾಳೆಹೊನ್ನೂರಿನ ಶ್ರೀ ರಂಭಾಪುರಿ ಪೀಠದ ಡಾ. ವೀರಸೋಮೇಶ್ವರ ಜಗದ್ಗುರುಗಳ ಸಾನ್ನಿಧ್ಯದಲ್ಲಿ ನಡೆಯಲಿದ್ದು, ಸಿದ್ಧರಬೆಟ್ಟ ಕ್ಷೇತ್ರದ ವೀರಭದ್ರ ಶಿವಾಚಾರ್ಯ ಸ್ವಾಮಿಗಳು ಕಾರ್ಯಕ್ರಮದ ನೇತೃತ್ವ ವಹಿಸಲಿದ್ದಾರೆ.

ಬಿಎಂಟಿಸಿ ಅಧ್ಯಕ್ಷ ವಿ.ಎಸ್. ಆರಾಧ್ಯ ಅವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದು, ವಿದ್ಯಾ ಸಂಸ್ಥೆಯ ಅಧ್ಯಕ್ಷ ಯು.ಎಂ. ಬಸವರಾಜ ಅವರು ಅಧ್ಯಕ್ಷತೆ ವಹಿಸಲಿದ್ದಾರೆ. ಕರ್ನಾಟಕ ಬ್ಯಾಂಕ್ ಪ್ರಾದೇಶಿಕ ಕಚೇರಿಯ ಎ.ಜಿ.ಎಮ್. ಅಜಿತ್ ಕೆ.ಆರ್. ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

ಈ ವರ್ಷದ "ಶ್ರೀ ಜಗದ್ಗುರು ರೇಣುಕ ಸಿರಿ ಪ್ರಶಸ್ತಿ"ಯನ್ನು ವಿ.ಎಸ್. ಆರಾಧ್ಯ ಅವರಿಗೆ ಪ್ರದಾನ ಮಾಡಲಾಗುತ್ತದೆ. ಇದೇ ಸಂದರ್ಭದಲ್ಲಿ ಪತ್ರಕರ್ತ ಪ್ರಶಾಂತ ರಿಪ್ಪನ್‌ಪೇಟೆ ಅವರು "ಜಗದ್ಗುರು ರೇಣುಕಾಚಾರ್ಯರು ಹಾಗೂ ಸಾಮಾಜಿಕ ಮೌಲ್ಯಗಳು" ಎಂಬ ವಿಷಯದ ಕುರಿತು ಉಪನ್ಯಾಸ ನೀಡಲಿದ್ದಾರೆ.

ಎಸ್.ಜೆ.ಆರ್.ಪಿ.ಯು. ಮಹಿಳಾ ಕಾಲೇಜಿನ ಕಲ್ಪನಾ ಟಿ.ಎಸ್. ಅವರು ಪ್ರಾಸ್ತಾವಿಕವಾಗಿ ಮಾತನಾಡಲಿದ್ದು, ಸಮಾರಂಭದ ಅಂಗವಾಗಿ ವಿದ್ಯಾ ಸಂಸ್ಥೆಯಲ್ಲಿನ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಪ್ರಶಂಸಾ ಪತ್ರಗಳನ್ನು ವಿತರಿಸಲಾಗುವುದು.

## 'ಅಣ್ಣಾವ್ರು' ಮೌಲ್ಯಗಳು ಯುವಜನತೆಗೆ ದಾರಿದೀಪ

▶▶ ಮೊದಲನೇ ಪುಟದಿಂದ

ಪಾಲಿನ 'ಅಣ್ಣಾವ್ರು' ಎಂದು ಸದಾ ನೆನಪಾಗುತ್ತಾರೆ. 2000ರಲ್ಲಿ ಅಪಹರಣದಂತಹ ಸಂಕಷ್ಟದಲ್ಲೂ ಜನರಿಗೆ ಧೈರ್ಯ ತುಂಬಿದ ಅವರ ಧೈರ್ಯವೂ ಮಾದರಿಯಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಕಲಾವಿದ ಗೌಡಪ್ಪ ಬೊಮ್ಮಪ್ಪನವರ ಹಾಗೂ ತಂಡದಿಂದ ಡಾ. ರಾಜಕುಮಾರ್ ಚಿತ್ರಗೀತೆಗಳ ಗಾಯನ ನಡೆಯಿತು. ವೀರಣ್ಣ ಅಂಗಡಿ ಮತ್ತು ತಂಡ ನಾಡಗೀತೆಗಳನ್ನು ಪ್ರಸ್ತುತಪಡಿಸಿದರು. ಪ್ರೊ. ಬಾಹುಬಲಿ ಜೈನರ ಕಾರ್ಯಕ್ರಮ ನಿರೂಪಿಸಿದರು. ಇದೇ ವೇಳೆ ಅಖಿಲ ಕರ್ನಾಟಕ ಡಾ. ರಾಜಕುಮಾರ್ ಅಭಿಮಾನಿಗಳ ಸಂಘಗಳ ಒಕ್ಕೂಟದ ಪದಾಧಿಕಾರಿಗಳು ಮತ್ತು ಅಭಿಮಾನಿಗಳಿಗೆ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ್ ಬಬರ್ಚಿ, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್., ಜಿಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಡಾ. ನಂದಾ ಹಣಬರಹಟ್ಟಿ, ವಾರ್ತಾ ಇಲಾಖೆ ಸಹಾಯಕ ನಿರ್ದೇಶಕ ವಸಂತ ಮಡ್ಲೂರ, ಡಿಡಿಪಿಐ ಆರ್.ಎಸ್. ಬುರಡಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ನಿಧನ

### ಮೆಹರುನ್ ಬಿ



**ಹಗರಿಬೊಮ್ಮನಹಳ್ಳಿ:** ಪಟ್ಟಣದ ಹಿರಿಯರಾದ ಮೆಹರುನ್ ಬಿ ಅವರು ಶುಕ್ರವಾರ ಮಧ್ಯಾಹ್ನ ನಿಧನರಾದರು.

ಮೃತರು ಜಿಕೆ ನ್ಯೂಸ್‌ನ ಅಬ್ದುಲ್ ಗಫಾರ್ ಖಾನ್ ಸೇರಿದಂತೆ ಇಬ್ಬರು ಪುತ್ರರು, ಅಪಾರ ಬಂದು ಬಳಗ ಅಗಲಿದ್ದಾರೆ.

ಸುಮಾರು 30 ವರ್ಷಗಳ ಕಾಲ ಆರೋಗ್ಯ ಇಲಾಖೆಯಲ್ಲಿ ಸೇವೆ ಸಲ್ಲಿಸಿದ ಅವರು, 10 ಸಾವಿರಕ್ಕೂ ಹೆಚ್ಚು ಹೆರಿಗೆಗಳಲ್ಲಿ ನೆರವಾಗುವ ಮೂಲಕ ಅನೇಕ ಕುಟುಂಬಗಳ ಜೀವನದಲ್ಲಿ ತಾಯಿಯ ಸ್ಥಾನ ಪಡೆದಿದ್ದರು. ಜನಸಾಮಾನ್ಯರು ಅವರನ್ನು "ಅಮ್ಮ" ಎಂದು ಕರೆದರೆ ಅದು ಅವರ ಸೇವೆಯ ಮಹತ್ವಕ್ಕೆ ಸಾಕ್ಷಿಯಾಗಿದೆ.

ಸರಳ ಜೀವನ, ಸೇವಾ ಮನೋಭಾವ ಮತ್ತು ಮಾನವೀಯತೆಗಳಿಂದ ಮೆಹರುನ್ ಬಿ ಅವರು ಎಲ್ಲರ ಮನಸ್ಸಿನಲ್ಲಿ ಶಾಶ್ವತ ಸ್ಥಾನ ಗಳಿಸಿದ್ದರು. ಅವರ ನಿಧನವು ಪಟ್ಟಣಕ್ಕೆ ಅಪಾರ ನಷ್ಟವಾಗಿದ್ದು, ಅವರ ಸೇವೆಗಳನ್ನು ಸ್ಮರಿಸುತ್ತಲೇ ಜನರು ಸಂತಾಪ ಸೂಚಿಸುತ್ತಿದ್ದಾರೆ. ಮೃತರ ಅಂತ್ಯಕ್ರಿಯೆ ಶುಕ್ರವಾರ ಸಂಜೆ ಖಬರ್ ಸ್ಥಾನದಲ್ಲಿ ಜರುಗಿತು.

ಕರ್ನಾಟಕ ಸರಕಾರ
**ಕೆ.ಎಚ್. ಪಾಟೀಲ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಗದಗ**
ಹಿಂದಿನ ಹೆಸರು ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಗದಗ
ಮುಳಗುಂದ ರಸ್ತೆ, ಮಲ್ಲಸಮುದ್ರ, ಗದಗ-582103
ದೂರವಾಣಿ ಸಂಖ್ಯೆ: 08372-200601
E-mail ID: glmsgadag@gmail.com web: www.gimsgadag.karnataka.gov.in
ಸಂಖ್ಯೆ: ಕೆ.ಎಚ್.ಪಿವೈವಿಸಂ/ಟೆಂಡರ್/2026-27/11 ದಿನಾಂಕ: 23.04.2026
**ಇ-ಟೆಂಡರ್ ಪ್ರಕಟಣೆ**
ಕೆ.ಎಚ್.ಪಾಟೀಲ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೋಧಕ ಆಸ್ಪತ್ರೆ ಗದಗ ಇಲ್ಲಿಗೆ ಉಪಕರಣ ಮತ್ತು ಯಂತ್ರೋಪಕರಣಗಳ ಸರಬರಾಜಿಗಾಗಿ ಆಸಕ್ತಿಯುಳ್ಳ ತಯಾರಕರಿಂದ, ಅಧಿಕೃತ ಮಾರಾಟಗಾರರಿಂದ ಹಾಗೂ ಸಂಘ ಸಂಸ್ಥೆಗಳಿಂದ ದ್ವಿ-ಲಕೋಟೆ ಪದ್ಧತಿಯಲ್ಲಿ ಇ-ಪ್ರೊಕ್ಯೂರ್‌ಮೆಂಟ್ ಮೂಲಕ ಟೆಂಡರ್‌ನ್ನು ದಿನಾಂಕ: 24.04.2026 ರಿಂದ ದಿನಾಂಕ: 05.05.2026ರ ಸಾಯಂಕಾಲ : 4:00 ಗಂಟೆವರೆಗೆ ಇ-ಪೋರ್ಟಲ್ ಸಂಖ್ಯೆ: **DME/2026-27/IND2275** **(https://kppp.karnataka.gov.in/)** ನಲ್ಲಿ ಟೆಂಡರ್ ಅಪ್‌ಲೋಡ್ ಮಾಡಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಕರ್ತವ್ಯದ ದಿನಗಳಲ್ಲಿ ಕೆಳಗಡೆ ಸಹಿ ಮಾಡಿದವರ ಕಚೇರಿಗೆ ಸಂಪರ್ಕಿಸಬಹುದು.
ಸಹಿ/- ನಿರ್ದೇಶಕರು,
ಕೆ.ಎಚ್.ಪಾಟೀಲ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಗದಗ
ವಾ.ಸಾ.ಸಂ.ಇ/ಗದಗ/36/ದೇಶಪಾಂಡೆಪಬ್ಲಿಸಿಟಿ/2026-27

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka